ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 212
ಬೆಲೆ ರೂ : 2.00
ರಾಯಚೂರು
ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಶನಿವಾರ: 01-08-2026

## ಕಾವೇರಿ ರಣಕಹಳೆ

# ಆ. 13ಕ್ಕೆ ಕರ್ನಾಟಕ ಬಂದ್

### 80ಕ್ಕೂ ಹೆಚ್ಚು ಕನ್ನಡ, ರೈತ ಹಾಗೂ ವಿವಿಧ ಸಂಘಟನೆಗಳ ಬೆಂಬಲ ● ಬೆಂಗಳೂರಿನಲ್ಲಿ ಬೃಹತ್ ರ್‍ಯಾಲಿ

**ಬೆಂಗಳೂರು, ಜು. 31:** ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುವುದನ್ನು ವಿರೋಧಿಸಿ ಆಗಸ್ಟ್ 13ರಂದು ಬೆಳಿಗ್ಗೆ 6ರಿಂದ ಸಂಜೆ 6ರವರೆಗೆ ರಾಜ್ಯವ್ಯಾಪಿ ಕರ್ನಾಟಕ ಬಂದ್‌ಗೆ ಕನ್ನಡ ಸಂಘಟನೆಗಳ ಒಕ್ಕೂಟ ಕರೆ ನೀಡಿದೆ. ವಾಟಾಳ್ ನಾಗರಾಜ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಸುಮಾರು 80ಕ್ಕೂ ಹೆಚ್ಚು ಕನ್ನಡಪರ, ರೈತ, ಕಾರ್ಮಿಕ ಹಾಗೂ ವಿವಿಧ ಸಂಘಟನೆಗಳು ಬಂದ್‌ಗೆ ಬೆಂಬಲ ಸೂಚಿಸಿವೆ.

ಸಭೆಯ ಬಳಿಕ ಮಾತನಾಡಿದ ವಾಟಾಳ್ ನಾಗರಾಜ್, ರಾಜ್ಯದಲ್ಲಿ ಮಳೆಯ ಕೊರತೆಯಿಂದ ರೈತರು ಸಂಕಷ್ಟದಲ್ಲಿರುವಾಗ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ಕಾವೇರಿ ನೀರು ಹರಿಸಬಾರದು ಎಂದು ಒತ್ತಾಯಿಸಿದರು. ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶವನ್ನು ಮರುಪರಿಶೀಲಿಸುವಂತೆ ಸುಪ್ರೀಂ ಕೋರ್ಟ್‌ಗೆ ರಾಜ್ಯ ಸರ್ಕಾರ ಅರ್ಜಿ ಸಲ್ಲಿಸಬೇಕು ಎಂದು ಆಗ್ರಹಿಸಿದರು.

ಆಗಸ್ಟ್ 13ರಂದು ಬೆಂಗಳೂರಿನ ಟೌನ್‌ಹಾಲ್‌ನಿಂದ ಫ್ರೀಡಂ ಪಾರ್ಕ್‌ವರೆಗೆ ಬೃಹತ್ ಪ್ರತಿಭಟನಾ ರ್‍ಯಾಲಿ ನಡೆಸಿ, ಬಳಿಕ ಬಹಿರಂಗ ಸಭೆ ಹಾಗೂ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು. ರಾಜ್ಯದ ಎಲ್ಲಾ ತಾಲೂಕು ಕೇಂದ್ರಗಳು ಹಾಗೂ ಪ್ರಮುಖ ರಾಷ್ಟ್ರೀಯ ಹೆದ್ದಾರಿಗಳಲ್ಲೂ ಪ್ರತಿಭಟನೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು. 2ನೇಪುಟಕ್ಕೆ



### ಬಂದ್‌ಗೆ ಬೆಂಬಲ ಘೋಷಿಸಿದ ಪ್ರಮುಖ ಸಂಘಟನೆಗಳು


ಕನ್ನಡ ಸಂಘಟನೆಗಳು, ರೈತ ಸಂಘಟನೆಗಳು, ಲಾರಿ ಮಾಲೀಕರ ಸಂಘ, ವಕೀಲರ ಸಂಘ, ಕೆಎಸ್‌ಆರ್‌ಟಿಸಿ ಕನ್ನಡ ಕ್ರಿಯಾ ಸಮಿತಿ, ಜಲಮಂಡಳಿ ನೌಕರರ ಸಂಘ, ಓಲಾ ಊಬರ್ ಚಾಲಕರ ಸಂಘ, ಆಟೋ ಚಾಲಕರ ಮತ್ತು ಮಾಲೀಕರ ಸಂಘ, ಹೋಟೆಲ್ ಮಾಲೀಕರ ಸಂಘ, ವಿವಿಧ ಕೈಗಾರಿಕಾ ಹಾಗೂ ಮಾರುಕಟ್ಟೆ ಸಂಘಗಳು ಸೇರಿದಂತೆ 80ಕ್ಕೂ ಹೆಚ್ಚು ಸಂಘಟನೆಗಳು ಬಂದ್‌ಗೆ ಬೆಂಬಲ ಘೋಷಿಸಿವೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯೂ ಬೆಂಬಲ ನೀಡುವ ಸಾಧ್ಯತೆ ಇದೆ.

### ಅಗತ್ಯ ಸೇವೆಗಳಿಗೆ ವಿನಾಯಿತಿ

- ಆಸ್ಪತ್ರೆಗಳು
- ಮೆಡಿಕಲ್ ಅಂಗಡಿಗಳು
- ಬ್ಯಾಂಕ್‌ಗಳು
- ಪೆಟ್ರೋಲ್ ಬಂಕ್‌ಗಳು
- ಹಾಲು ಸಾಗಣೆ
- ಮೆಟ್ರೋ ಸೇವೆ (ನಿರೀಕ್ಷೆ)

ಬಿಎಂಟಿಸಿ ಸೇವೆ ಕುರಿತು ಇನ್ನೂ ಸ್ಪಷ್ಟತೆ ಇಲ್ಲ.


### ಹೆದ್ದಾರಿ, ಟೋಲ್‌ಗಳಲ್ಲಿ ದಿಗ್ಬಂಧನ



ಬೆಂಗಳೂರು, ಮೈಸೂರು ಎಕ್ಸ್‌ಪ್ರೆಸ್‌ವೇ, ಮಂಡ್ಯ, ಹಾಸನ, ತುಮಕೂರು, ಮೈಸೂರು, ಚಾಮರಾಜನಗರ, ಈರೋಡ್, ನಂಜನಗೂಡು, ಊಟಿ ಸೇರಿದಂತೆ ಹಲವು ಪ್ರಮುಖ ಹೆದ್ದಾರಿಗಳಲ್ಲಿ ಪ್ರತಿಭಟನೆ ನಡೆಸಲು ಯೋಜನೆ ರೂಪಿಸಲಾಗಿದೆ.

ಬೆಂಗಳೂರು, ನೆಲಮಂಗಲ ನವಯುಗ ಟೋಲ್, ದೇವನಹಳ್ಳಿ ವಿಮಾನ ನಿಲ್ದಾಣ ಟೋಲ್, ರಾಮನಗರ, ಶ್ರೀರಂಗಪಟ್ಟಣ, ಟಿ. ನರಸೀಪುರ, ಎಲೆಕ್ಟ್ರಾನಿಕ್ ಸಿಟಿ ಸೇರಿದಂತೆ ಹಲವು ಟೋಲ್‌ಗಳಲ್ಲಿ ಪ್ರತಿಭಟನೆ ಸಾಧ್ಯತೆ ಇದೆ.

## ಬೀದಿನಾಯಿಗಳ ದಾಳಿಗೆ 15ಕ್ಕೂ ಹೆಚ್ಚು ಕುರಿಮರಿಗಳ ಸಾವು



ಧೈರ್ಯದ ದಾರಿ

**ಮಾನ್ವಿ, ಜು. 31:** ತಾಲೂಕಿನ ದೇವಿಪುರ ಗ್ರಾಮದ ನವಗ್ರಾಮದ ಸಮೀಪದ ಬಯಲು ಜಾಗದಲ್ಲಿ ಶುಕ್ರವಾರ ಮಧ್ಯಾಹ್ನ ಸುಮಾರು 2 ಗಂಟೆ ವೇಳೆಗೆ ನಾಲ್ಕರಿಂದ ಐದು ಬೀದಿನಾಯಿಗಳು ಕುರಿ ಹಿಂಡಿನ ಮೇಲೆ ಏಕಾಏಕಿ ದಾಳಿ ನಡೆಸಿದ ಪರಿಣಾಮ 15ಕ್ಕೂ ಹೆಚ್ಚು ಕುರಿಮರಿಗಳು ಸಾವನ್ನಪ್ಪಿದ್ದು, 20ಕ್ಕೂ ಹೆಚ್ಚು ಕುರಿಮರಿಗಳಿಗೆ ತೀವ್ರ ಗಾಯಗಳಾಗಿವೆ.

ಈರಲಗಡ್ಡಿ ಗ್ರಾಮದ ಕುರಿಗಾಯಿ ದೇವೇಂದ್ರಪ್ಪ ಅವರಿಗೆ ಸೇರಿದ ಕುರಿ ಹಿಂಡಿನ ಮೇಲೆ ನಡೆದ ಈ ದಾಳಿಯಲ್ಲಿ 5ಕ್ಕೂ ಹೆಚ್ಚು ಕುರಿಮರಿಗಳು ಗಂಭೀರ ಗಾಯಗೊಂಡಿದ್ದು, ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿವೆ. ಘಟನೆಯಿಂದ ಕುರಿಗಾಯಿ ದೇವೇಂದ್ರಪ್ಪ ಅವರಿಗೆ ಅಂದಾಜು 1 ಲಕ್ಷಕ್ಕೂ ಅಧಿಕ ನಷ್ಟ ಉಂಟಾಗಿದೆ ಎಂದು ತಿಳಿದುಬಂದಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಪಶು ವೈದ್ಯಕೀಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಗಾಯಗೊಂಡ ಕುರಿಮರಿಗಳನ್ನು ಪರಿಶೀಲಿಸಿ ಅಗತ್ಯ ಚಿಕಿತ್ಸೆ ಹಾಗೂ ಮುಂದಿನ ಕ್ರಮಗಳನ್ನು ಕೈಗೊಂಡಿದ್ದಾರೆ. ಗ್ರಾಮದಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಶಾಶ್ವತ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಶಿಕ್ಷಣ ಮತ್ತು ಆರೋಗ್ಯದಿಂದ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ: ಡಾ. ವಸಂತ್ ಕುಮಾರ್



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಶ್ರೀ ಚೌಡೇಶ್ವರಿ ಕಲ್ಯಾಣ ಮಂಟಪದಲ್ಲಿ ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆ ಮಾನವಿ, ಶ್ರೀ ಮೈಲಾರಪ್ಪ ವೆಂಕಪ್ಪ ಓಲೇಕಾರ ಪದವಿ ಪೂರ್ವ ಕಾಲೇಜು ಮಾನವಿ ವತಿಯಿಂದ ನಡೆದ 2026 – 27 ನೇ ಸಾಲಿನ ಪ್ರಥಮ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮವನ್ನು ರಿಮ್ಸ್ ವೈದ್ಯರಾದ ಡಾ. ವಸಂತ್ ಕುಮಾರ್ ಉದ್ಘಾಟಿಸಿ ಮಾತನಾಡಿ ಶಿಕ್ಷಣ ಮತ್ತು ಆರೋಗ್ಯದಿಂದ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ. ವಿದ್ಯಾರ್ಥಿಗಳು ಕಠಿಣ ಪರಿಶ್ರಮ ನಿರಂತರ ಅಭ್ಯಾಸದ ಜೊತೆಗೆ ಉಪನ್ಯಾಸಕರಿಂದ ಅಗತ್ಯ ಮಾರ್ಗದರ್ಶನವನ್ನು ಪಡೆದುಕೊಂಡು ಜೀವನದಲ್ಲಿ ಉನ್ನತ ಭಾವಿಷ್ಯವನ್ನು ರೂಪಿಸಿಕೊಳ್ಳುವುದರ ಜೊತೆಗೆ ಸಮಾಜ ಮುಖಿ ಕಾರ್ಯಗಳನ್ನು ತಮ್ಮನ್ನು ತೊಡಗಿಸಿಕೊಳ್ಳುವಂತೆ ತಿಳಿಸಿದರು.

ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆ ಮಾನ್ವಿ ಅಧ್ಯಕ್ಷರಾದ ಮಹಾಂತೇಶ ಓಲೇಕಾರ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ ಈ ಭಾಗದಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ನಮ್ಮ ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆಯು ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುವ ಮೂಲಕ ಉನ್ನತವಾದ ಜೀವನವನ್ನು ರೂಪಿಸಿಕೊಳ್ಳುವುದಕ್ಕೆ ನೇರವು ನೀಡುತ್ತ ಬಂದಿದೇವೆ ಎಂದು ತಿಳಿಸಿದರು.

ಕಾ.ನಿ.ಪ. ಸಂಘದ ತಾ.ಅಧ್ಯಕ್ಷರಾದ ಅಶೋಕ ತಡಕಲ್ ಮಾತನಾಡಿ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣವನ್ನು ಪಡೆಯುವುದಕ್ಕೆ ಎಂದಿಗೂ ಕೂಡ ಬಡತನ ಅಡಿಯಾಗುವುದಿಲ್ಲ ಉನ್ನತ ಸಾಧನಯೆ ಗುರಿಯನ್ನು ಹೊಂದಿ ಸಾಗಿದಾಗ ಮಾತ್ರ ಯಶಸ್ಸನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶ್ರೀ ಎಮ್ ವಿ ಓಲೇಕಾರ ಪದವಿ ಪೂರ್ವ ಕಾಲೇಜು ಮಾನವಿ ಪ್ರಾಂಶುಪಾಲರಾದ ಶ್ರೀದೇವಿ ವೆಂಕಟೇಶ ಓಲೇಕಾರ, ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆ ಮಾನ್ವಿಯ ಕಾರ್ಯದರ್ಶಿ ವೆಂಕಟೇಶ ಓಲೇಕಾರ, ಶ್ರೀ ವೆಂಕಟೇಶ್ವರ ಪ್ರೌಢ ಶಾಲೆ ಮಾನವಿಯ ಆಡಳಿತ ಅಧಿಕಾರಿಗಳಾದ ಶಂಕ್ರಪ್ಪ ನಕ್ಕುಂದಿ, ಕಾಲೇಜಿನ ಉಪನ್ಯಾಸಕರಾದ ನೀಲಮ್ಮ, ಅಬ್ದುಲ್‌ರಹೀಮ್, ಆನಂದಕುಮಾರ, ರವಿಚಂದ್ರ, ಶರಣಬಸವ, ನಾಗರಾಜ, ಮಹದೇವ, ಸ್ವಾತಿ ಹಾಗೂ ವಿದ್ಯಾರ್ಥಿಗಳು ಇದ್ದರು.

## ಆರೋಗ್ಯ ಇಲಾಖೆಯ ಹುದ್ದೆಗಳ ನೇಮಕಾತಿ ರದ್ದು


**ರಾಯಚೂರು ಜುಲೈ 31:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ 2025-26 ನೇ ಸಾಲಿಗೆ ಖಾಲಿ ಇರುವ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಹುದ್ದೆಗಳ ನೇಮಕಾತಿಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನ ಕಾರ್ಯದರ್ಶಿಗಳ ಸೂಚನೆ ಮೇರಿಗೆ ರದ್ದುಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ ರಾಯಚೂರು ಹಾಗೂ ಮಾನ್ಯ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ರಾಯಚೂರು ಇವರ ಅನುಮೋದನೆ ಮೇರೆಗೆ ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ 2ನೇಪುಟಕ್ಕೆ►

## ಪಿಎಂ ಪೋಷಣ್ ಯೋಜನೆಯ ಮೊಟ್ಟೆ, ಬಾಳೆಹಣ್ಣು ವಿತರಣೆಯಲ್ಲಿ ಅಕ್ರಮ:

### ಮುಖ್ಯಗುರು ಹಾಗೂ ವಾರ್ಡನ್ ವಿರುದ್ಧ ರಮೇಶ್ ಬಂಡಾರಿ ಗಂಭೀರ ಆರೋಪ

ಧೈರ್ಯದ ದಾರಿ



**ಸಿರವಾರ:** ತಾಲೂಕಿನ ಮಲ್ಲಟ್ ಗ್ರಾಮದ ಕಸ್ತೂರಿ ಬಾ ಗಾಂಧಿ ಬಾಲಕಿಯರ ವಸತಿ ಶಾಲೆಯಲ್ಲಿ ಪಿಎಂ ಪೋಷಣ್ (ಮಧ್ಯಾಹ್ನದ ಉಪಹಾರ) ಯೋಜನೆಯಡಿ ವಿದ್ಯಾರ್ಥಿನಿಯರಿಗೆ ಕಳೆದ ಎರಡು ತಿಂಗಳಿಂದ ಸತತವಾಗಿ ಮೊಟ್ಟೆ ಮತ್ತು ಬಾಳೆಹಣ್ಣುಗಳನ್ನು ವಿತರಿಸದೆ ವಂಚಿಸಲಾಗಿದೆ ಎಂದು ಸಾರ್ವಜನಿಕರು ಹಾಗೂ ಪಾಲಕರು ಗಂಭೀರ ಆರೋಪ ಮಾಡಿದ್ದಾರೆ ಎಂದು ಮುಖಂಡರಾದ ರಮೇಶ್ ಬಂಡಾರಿ ತಿಳಿಸಿದ್ದಾರೆ. ವಿದ್ಯಾರ್ಥಿಗಳಿಗೆ ಪೌಷ್ಟಿಕಾಂಶಯುಕ್ತ ಆಹಾರ ಒದಗಿಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯ ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳುವ ಉದ್ದೇಶದಿಂದ ಶಾಲೆಯ ಮುಖ್ಯಗುರುಗಳು ಮತ್ತು ವಾರ್ಡನ್ ನಿಯಮಗಳನ್ನು ಗಾಳಿಗೆ ತೂರಿ ಈ ಅಕ್ರಮವೆಸಗಿದ್ದಾರೆ ಎಂದು ಪಾಲಕರು ದೂರಿದ್ದಾರೆ.

**ವಿದ್ಯಾರ್ಥಿಗಳಿಗೆ ಬೆದರಿಕೆ ಆರೋಪ:** ಬಾಳೆಹಣ್ಣು ಹಾಗೂ ಮೊಟ್ಟೆ ವಿತರಿಸದ ಬಗ್ಗೆ ವಿದ್ಯಾರ್ಥಿನಿಯರು ಪ್ರಶ್ನಿಸಿದಾಗ ಮತ್ತು ಈ ವಿಷಯವನ್ನು ತಮ್ಮ ಪಾಲಕರಿಗೆ ತಿಳಿಸಿದಾಗ, ಶಾಲೆಯ ಮುಖ್ಯಗುರುಗಳು ಹಾಗೂ ವಾರ್ಡನ್ ವಿದ್ಯಾರ್ಥಿಗಳಿಗೆ ಬೆದರಿಕೆ ಹಾಕಿದ್ದಾರೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಕ್ರಮಕ್ಕೆ ಆಗ್ರಹ:** ಎರಡು ತಿಂಗಳಿಂದ ಒಂದು ದಿನವೂ ಮೊಟ್ಟೆ ಹಾಗೂ ಬಾಳೆಹಣ್ಣು ನೀಡದೆ, ಪೌಷ್ಟಿಕ ಆಹಾರಕ್ಕಾಗಿ ಬಿಡುಗಡೆಯಾದ ಅನುದಾನವನ್ನು ಕೊಳ್ಳೆಹೊಡೆದಿರುವ ಸಂಬಂಧ ಶಾಲೆಯ ಮುಖ್ಯಗುರುಗಳು ಮತ್ತು ವಾರ್ಡನ್ ಮೇಲೆ ಹಿರಿಯ ಅಧಿಕಾರಿಗಳು ಕೂಡಲೇ ಸೂಕ್ತ ತನಿಖೆ ನಡೆಸಿ, ಕಾನೂನು ಕ್ರಮ ಜರುಗಿಸಬೇಕೆಂದು ಸಾರ್ವಜನಿಕರು ಮತ್ತು ಪಾಲಕರು ಒತ್ತಾಯಿಸಿದ್ದಾರೆ.

## ಮಾನ್ವಿ ಪಟ್ಟಣದ ರಸ್ತೆ ಅಗಲೀಕರಣಕ್ಕೆ ಸಮಗ್ರ ಯೋಜನೆ ರೂಪಿಸಿ:

### ಎಐಎಂಐಎಂ ಅಧ್ಯಕ್ಷ ನಾಸೀರ್ ಅಲಿ ಖುರೇಷಿ ಆಗ್ರಹ

ಧೈರ್ಯದ ದಾರಿ



**ಮಾನ್ವಿ, ಜುಲೈ 31:** ಮಾನ್ವಿ ಪಟ್ಟಣದ ಸಮಗ್ರ ಅಭಿವೃದ್ಧಿಗೆ ರಸ್ತೆ ಅಗಲೀಕರಣಕ್ಕೆ ಆದ್ಯತೆ ನೀಡಬೇಕು ಎಂದು ಎಐಎಂಐಎಂ ಪಕ್ಷದ ಮಾನ್ವಿ ಅಧ್ಯಕ್ಷ ನಾಸೀರ್ ಅಲಿ ಖುರೇಷಿ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಾನ್ವಿ ಪಟ್ಟಣದಲ್ಲಿ ಕೇವಲ ಪ್ರಮುಖ ವೃತ್ತಗಳ ಅಗಲೀಕರಣ ಮಾಡಿದರೆ ಸಾಲದು. ಲೋಯೋಲಾ ಶಾಲೆಯಿಂದ ಸರ್ಕಾರಿ ಪದವಿ ಕಾಲೇಜುವರೆಗೆ ಸೇರಿದಂತೆ ಪ್ರಮುಖ ರಸ್ತೆಗಳನ್ನು ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಸಮರ್ಪಕ ಅಗಲದಲ್ಲಿ ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು. ಪಟ್ಟಣದಲ್ಲಿ ವಾಹನಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಕಿರಿದಾದ ರಸ್ತೆಗಳ ಕಾರಣ ಸಂಚಾರ ದಟ್ಟಣೆ, ಅಪಘಾತಗಳ ಸಂಭವ ಹಾಗೂ ಸಾರ್ವಜನಿಕರಿಗೆ ತೊಂದರೆಗಳು ಹೆಚ್ಚುತ್ತಿವೆ. ಈಗಲೇ ದೂರದೃಷ್ಟಿಯ ಯೋಜನೆ ರೂಪಿಸದಿದ್ದರೆ ಮುಂದಿನ 35-40 ವರ್ಷಗಳವರೆಗೆ ಇದೇ ಸಮಸ್ಯೆ ಮುಂದುವರಿಯುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟರು. ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ರಸ್ತೆ ಮಧ್ಯಭಾಗದಿಂದ ನಿಗದಿತ ಅಂತರವನ್ನು ಕಾಯ್ದುಕೊಂಡು ರಸ್ತೆ ನಿರ್ಮಾಣ ಮಾಡುವ ಬಗ್ಗೆ ಸರ್ಕಾರ ಮತ್ತು ಸಂಬಂಧಿತ ಇಲಾಖೆಗಳು ಗಂಭೀರವಾಗಿ ಪರಿಶೀಲನೆ ನಡೆಸಬೇಕು. ಈ ವಿಷಯದಲ್ಲಿ ಅಗತ್ಯವಿರುವ ತಾಂತ್ರಿಕ ಹಾಗೂ ಕಾನೂನು ಮಾನದಂಡಗಳನ್ನು ಅನುಸರಿಸಿ ರಸ್ತೆ ಅಗಲೀಕರಣ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು. ರಾಜಕೀಯ ಇಚ್ಛಾಶಕ್ತಿಯ ಕೊರತೆಯಿಂದ ಅಭಿವೃದ್ಧಿ ಕಾರ್ಯಗಳು ವಿಳಂಬವಾಗುತ್ತಿವೆ ಎಂದು ಆರೋಪಿಸಿದ ಅವರು, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಪಟ್ಟಣದ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಮಾನ್ವಿಯ ಅಭಿವೃದ್ಧಿ ಯಾವುದೇ ಪಕ್ಷ ಅಥವಾ ವ್ಯಕ್ತಿಯ ವಿಷಯವಲ್ಲ. ಇದು ಪ್ರತಿಯೊಬ್ಬ ನಾಗರಿಕನ ಕನಸಾಗಿದೆ. ಆದ್ದರಿಂದ ಸಾರ್ವಜನಿಕರು, ವ್ಯಾಪಾರಸ್ಥರು, ಸಂಘ-ಸಂಸ್ಥೆಗಳು ಹಾಗೂ ಜನಪ್ರತಿನಿಧಿಗಳು ಒಗ್ಗಟ್ಟಿನಿಂದ ರಸ್ತೆ ಅಗಲೀಕರಣ ಯೋಜನೆಯನ್ನು ಯಶಸ್ವಿಗೊಳಿಸಬೇಕು ಎಂದು ನಾಸೀರ್ ಅಲಿ ಖುರೇಷಿ ಕರೆ ನೀಡಿದರು.

ಮೊದಲನೇ ಪುಟದಿಂದ

## ಕಾವೇರಿ ನೀರು ತಮಿಳುನಾಡಿಗೆ ಹರಿಸದಂತೆ ವಿರೋಧಿಸಿ ಆಗಸ್ಟ್ 13ರಂದು ರಾಜ್ಯವ್ಯಾಪಿ ಬಂದ್

ಬಂದ್‌ನಿಂದ ಬಾಧಿತವಾಗುವ ಸಾಧ್ಯತೆ ಇರುವ ಸೇವೆಗಳು
ಶಾಲೆ-ಕಾಲೇಜುಗಳು, ಅಂಗಡಿ-ಮುಂಗಟ್ಟುಗಳು, ಹೋಟೆಲ್‌ಗಳು, ಬೇಕರಿಗಳು, ಮಾರುಕಟ್ಟೆಗಳು, ಎಪಿಎಂಸಿ, ಸಿನಿಮಾ ಮಂದಿರಗಳು, ಮಾಲ್‌ಗಳು, ಆಟೋ ಸೇವೆ, ಬೀದಿಬದಿ ವ್ಯಾಪಾರ

ಕರವೇ ಬೆಂಬಲವಿಲ್ಲ: ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ರಾಜ್ಯಾಧ್ಯಕ್ಷ ನಾರಾಯಣಗೌಡ ಈ ಬಂದ್‌ಗೆ ತಮ್ಮ ಸಂಘಟನೆಯ ಬೆಂಬಲ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

"ಪದೇ ಪದೇ ಬಂದ್ ನಡೆಸುವುದರಿಂದ ಸರ್ಕಾರಕ್ಕೂ ಸಾರ್ವಜನಿಕರಿಗೂ ನಷ್ಟವಾಗುತ್ತದೆ. ಈ ಬಾರಿ ಕಾವೇರಿ ಹೋರಾಟವನ್ನು ದೆಹಲಿಯ ಜಂತರ್ ಮಂತರ್‌ಗೆ ಕೊಂಡೊಯ್ಯುತ್ತೇವೆ" ಎಂದು ಅವರು ತಿಳಿಸಿದ್ದಾರೆ.

ವಿಮಾನ ನಿಲ್ದಾಣ ಮುತ್ತಿಗೆ ಎಚ್ಚರಿಕೆ: ತಮಿಳುನಾಡು ಮುಖ್ಯಮಂತ್ರಿ ವಿಜಯ್ ಆಗಸ್ಟ್ 3ರಂದು ಬೆಂಗಳೂರಿಗೆ ಭೇಟಿ ನೀಡಿದರೆ ವಿಮಾನ ನಿಲ್ದಾಣಕ್ಕೆ ಮುತ್ತಿಗೆ ಹಾಕಲಾಗುವುದು ಎಂದು ವಾಟಾಳ್ ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.

"ಇದು ಸರ್ವಪಕ್ಷ ಸಭೆಯಲ್ಲ": ಕಾವೇರಿ ವಿಚಾರವಾಗಿ ರಾಜ್ಯ ಸರ್ಕಾರ ಕರೆಯುತ್ತಿರುವ ಸಭೆಯನ್ನು ಟೀಕಿಸಿರುವ ವಾಟಾಳ್ ನಾಗರಾಜ್, "ಕನ್ನಡಪರ ಸಂಘಟನೆಗಳು, ರೈತರು ಹಾಗೂ ವಿವಿಧ ಸಂಘಟನೆಗಳನ್ನು ಆಹ್ವಾನಿಸದೆ ನಡೆಯುವ ಸಭೆಯನ್ನು ಸರ್ವಪಕ್ಷ ಸಭೆ ಎನ್ನಲು ಸಾಧ್ಯವಿಲ್ಲ. ತುರ್ತು ವಿಧಾನಸಭೆ ಅಧಿವೇಶನ ಕರೆದು ಅಂತಿಮ ತೀರ್ಮಾನ ಕೈಗೊಳ್ಳಬೇಕು" ಎಂದು ಆಗ್ರಹಿಸಿದರು.

## ಆರೋಗ್ಯ ಇಲಾಖೆಯ ಹುದ್ದೆಗಳ ನೇಮಕಾತಿ ರದ್ದು

ಮಾಡಿಕೊಳ್ಳಲು, ಅರ್ಹ ಅಭ್ಯರ್ಥಿಗಳಿಂದ ದಿನಾಂಕ: 25.02.2026 ರಿಂದ 11.03.2026ರವರೆಗೆ ವೆಬ್‌ಸೈಟ್: https://raichur.nic.in ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಅದರನ್ವಯ ಕಿರಿಯ ಮಹಿಳಾ ಆರೋಗ್ಯ ಸಹಾಕಿಯರು-18 ಹುದ್ದೆಗಳು ಪಿ.ಎಂ. ಅಭೀಮ್ ಕಾರ್ಯಕ್ರಮ, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ-01 ಹುದ್ದೆ ಎನ್.ಯು.ಹೆಚ್.ಎಂ. ಕಾರ್ಯಕ್ರಮ ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳು-01 ಹುದ್ದೆ ಎನ್.ಯು.ಹೆಚ್.ಎಂ. ಕಾರ್ಯಕ್ರಮದಡಿ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.
ದಿನಾಂಕ : 13.05.2026 ರಂದು ಮಾನ್ಯ ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾ ನಿಯಮಗಳು-1) ಅವರ ಕರ್ನಾಟಕ ಸರ್ಕಾರದ ನಡವಳಿಗಳು ಪ್ರಕಾರ ಈ ಮೇಲೆ ವಿವರಿಸಿದ ಹುದ್ದೆಗಳ ನೇಮಕಾತಿಯನ್ನು ರದ್ದುಪಡಿಸಲಾಗಿದೆ. ಹಾಗೂ ಹೊಸದಾಗಿ ನೇಮಕಾತಿ ಅಧಿಸೂಚನೆಯನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು ಎಂದು ರಾಯಚೂರಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ.ಮಹಾಂತ್ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ಅಂಗವಾಗಿ ವ್ಯವಸ ಮುಕ್ತ ದಿನಾಚರಣೆ ಇಂದು

**ರಾಯಚೂರು ಜುಲೈ 31:** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜ್ ರಾಯಚೂರು, ಹಾಗೂ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು ಇವರಗಳ ಸಂಯುಕ್ತಾಶ್ರಯದಲ್ಲಿ ಶ್ರೀ.ಮ.ನಿ.ಪ್ರ. ಡಾ.ಮಹಾಂತ್ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ಅಂಗವಾಗಿ ವ್ಯವಸ ಮುಕ್ತ ದಿನಾಚರಣೆಯನ್ನು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಗಸ್ಟ್ 01ರ ಬೆಳಿಗ್ಗೆ 11ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲೆಯ ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.
ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್ ಅವರು ಘನ ಉಪಸ್ಥಿತಿ ವಹಿಸುವರು.

ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.
ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎನ್.ಎಸ್.ಬೋಸರಾಜು, ಎ.ವಸಂತಕುಮಾರ, ಬಸನಗೌಡ ಬಾದರ್ಲಿ,

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಹಣಕಾಸು ನಿಗಮ ಬೆಂಗಳೂರಿನ ವ್ಯವಸ್ಥಾಪಕರು( ಹೆ.ಪ್ರ) ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್.ನಕುಲ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಪ್ರೊ.ಯಂಕಣ್ಣ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ಮನೋರೋಗ ತಜ್ಞರಾದ ಡಾ.ವಿ.ಎ.ಮಾಲಿ ಪಾಟೀಲ್ ಅವರು ಶ್ರೀ.ಮ.ನಿ.ಪ್ರ. ಡಾ.ಮಹಾಂತ್ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ಅಂಗವಾಗಿ ವ್ಯವಸ ಮುಕ್ತ ದಿನಾಚರಣೆ ಅಂಗವಾಗಿ ಉಪನ್ಯಾಸ ನೀಡಲಿದ್ದಾರೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ನಿರ್ದೇಶಕರಾದ ಜಿ.ಸುರೇಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನವಿ: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 31:** ರಾಯಚೂರು ಜಿಲ್ಲೆಯ ಮಾನವಿ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ವಿವಿಧ ಗ್ರಾಮ ಪಂಚಾಯತ ಹಾಗೂ ಪುರಸಭೆ ವ್ಯಾಪ್ತಿಯಲ್ಲಿ 05-ಅಂಗನವಾಡಿ ಕಾರ್ಯಕರ್ತೆ ಮತ್ತು 30-ಸಹಾಯಕಿಯರು ಖಾಲಿ ಇರುವ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.
ಆಸಕ್ತರು ದಿನಾಂಕ: 28-08-2026ರೊಳಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಲಯಕ್ಕೆ ಕಚೇರಿಯ ಸಮಯದಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
ಪಟೇಲ್‌ರೋಡ್ ವ್ಯಾಪ್ತಿಯಲ್ಲಿ ಆಗಸ್ಟ್ 02ರಂದು ವಿದ್ಯುತ್ ವ್ಯತ್ಯಯ
ರಾಯಚೂರು ಜುಲೈ 31 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ವ್ಯಾಪ್ತಿಯ ಪಟೇಲ್‌ರೋಡ್‌ನಲ್ಲಿ ಕಂಬ ಮತ್ತು ವೈರ್‌ಗಳನ್ನು ಸ್ಥಳಾಂತರಿಸುವ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಆಗಸ್ಟ್ 2ರ ಬೆಳಿಗ್ಗೆ 11ಗಂಟೆಯಿಂದ ಸಂಜೆ 05:ಗಂಟೆಯವರೆಗೆ ಶೆಟ್ಟಿಬಾವಿ ಚೌಕ್, ಓಲ್ಡ್ ನೇತಾಜಿ ನಗರ ಪೊಲೀಸ್ ಸ್ಟೇಷನ್, ಬಂಗಾರ ಬಜಾರ್, ಪಟೇಲ್ ರೋಡ್, ಮಡ್ಡಿಪೇಟ್, ಗೀತಾ ಮಂದಿರ ರೋಡ್, ದೇನಾ ಬ್ಯಾಂಕ್, ಬ್ರೇಸ್ತವಾರ ಪೇಟೆ, ಉಪ್ಪಾರ ವಾಡಿ, ಜಾಮೀಯ ಮಸ್ಜೀದ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗುತ್ತಿದ್ದು ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.
ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಗಸ್ಟ್ 2ರಂದು ಪೊಲೀಸ್ ಕಾನ್ಸ್ಟೇಬಲ್ ನೇಮಕಾತಿ ಪರೀಕ್ಷೆ: ಮಾನವಿಯಲ್ಲಿ ಸಕಲ ಸಿದ್ಧತೆ

ಧೈರ್ಯದ ದಾರಿ

**ಮಾನ್ವಿ:** ಕರ್ನಾಟಕ ರಾಜ್ಯ ಪೊಲೀಸ್ ಕಾನ್ಸ್ಟೇಬಲ್ ಹುದ್ದೆಗಳ ನೇಮಕಾತಿಗಾಗಿ ಆಗಸ್ಟ್ 2 ಭಾನುವಾರದಂದು ನಡೆಯಲಿರುವ ಸ್ಪರ್ಧಾತ್ಮಕ ಪರೀಕ್ಷೆಗೆ ಮಾನ್ವಿ ತಾಲೂಕು ಆಡಳಿತವು ಎಲ್ಲಾ ರೀತಿಯ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ ಎಂದು ತಹಸೀಲ್ದಾರ ಭೀಮರಾಯ ಬಿ. ರಾಮಸಮುದ್ರ ತಿಳಿಸಿದ್ದಾರೆ.

ಪರೀಕ್ಷೆಯನ್ನು ಶಾಂತಿಯುತ, ಸುಸೂತ್ರ ಹಾಗೂ ಪಾರದರ್ಶಕವಾಗಿ ನಡೆಸಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅಭ್ಯರ್ಥಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಮೂಲಸೌಕರ್ಯ, ಭದ್ರತೆ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಎಲ್ಲ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ಅವರು ಹೇಳಿದರು.

ಮಾನ್ವಿ ತಾಲೂಕಿನಾದ್ಯಂತ ಒಟ್ಟು 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಹಾಗೂ ಸಂಬಂಧಿತ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಹಸೀಲ್ದಾರ ಭೀಮರಾಯ ಬಿ. ರಾಮಸಮುದ್ರ ತಿಳಿಸಿದರು.

**ಪರೀಕ್ಷಾ ಕೇಂದ್ರಗಳ ವಿವರ:**
**ಲೋಯೋಲ ಪದವಿಪೂರ್ವ ಕಾಲೇಜು, ಮಾನವಿ**
**ಬಾಲಕರ ಪದವಿಪೂರ್ವ ಕಾಲೇಜು, ಮಾನವಿ**
**ಬಾಲಕಿಯರ ಪದವಿಪೂರ್ವ ಕಾಲೇಜು, ಮಾನವಿ**
**ಕಲ್ಮಠ ಪದವಿಪೂರ್ವ ಕಾಲೇಜು, ಮಾನವಿ**



**ಶಾರದ ಪದವಿಪೂರ್ವ ಕಾಲೇಜು, ಮಾನವಿ**
**ಕಳಿಂಗ ಪದವಿಪೂರ್ವ ಕಾಲೇಜು, ಮಾನವಿ**
**ಎಸ್.ಆರ್.ಎಸ್.ವಿ.ಎಸ್. ಪದವಿಪೂರ್ವ ಕಾಲೇಜು, ಮಾನವಿ**

ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಪರೀಕ್ಷಾ ಕೇಂದ್ರಗಳಿಗೆ ಆಗಮಿಸಿ, ಪ್ರವೇಶ ಪತ್ರ ಸೇರಿದಂತೆ ಅಗತ್ಯ ದಾಖಲಾತಿಗಳನ್ನು ಕಡ್ಡಾಯವಾಗಿ ತರಬೇಕು. ಪರೀಕ್ಷಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಅಧಿಕಾರಿಗಳಿಗೆ ಸಹಕರಿಸುವಂತೆ ತಹಸೀಲ್ದಾರ ಭೀಮರಾಯ ಬಿ. ರಾಮಸಮುದ್ರ ಮನವಿ ಮಾಡಿದ್ದಾರೆ.

## ನಿವೃತ್ತ ಮುಖ್ಯಗುರು ದತ್ತಪ್ಪ ಅಲ್ಲೂರು ಅವರಿಗೆ ಅದ್ದೂರಿ ಬೀಳ್ಕೊಡುಗೆ ದದ್ದಲ್ ಶಾಲೆಯಲ್ಲಿ ಅಭಿನಂದನಾ ಸಮಾರಂಭ



ಧೈರ್ಯದ ದಾರಿ

**ಮಾನ್ವಿ, ಜು.31:** ಮಾನ್ವಿ ತಾಲೂಕಿನ ದದ್ದಲ್ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ದತ್ತಪ್ಪ ಅಲ್ಲೂರು ಅವರು ಇತ್ತೀಚೆಗೆ ವಯೋ ನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿ ಶುಕ್ರವಾರ ಶಾಲೆಯ ಆವರಣದಲ್ಲಿ ಹಳೆ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಗ್ರಾಮಸ್ಥರ ವತಿಯಿಂದ ಆತ್ಮೀಯ ಬೀಳ್ಕೊಡುಗೆ ಹಾಗೂ ಅಭಿನಂದನಾ ಸಮಾರಂಭ ನಡೆಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕಾತರಕಿ ಶಾಲೆಯ ಮುಖ್ಯಗುರು ಪ್ರಕಾಶ್, ಶಿಕ್ಷಕ ವೃತ್ತಿ ಅತ್ಯಂತ ಗೌರವಯುತವಾದದ್ದು. ಪ್ರತಿಯೊಬ್ಬ ಶಿಕ್ಷಕರೂ ತಮ್ಮ ವೃತ್ತಿಯನ್ನು ಗೌರವದಿಂದ ನಿರ್ವಹಿಸಬೇಕು. ಶಿಕ್ಷಣ ಇಲಾಖೆಯಲ್ಲಿ ಸುಧೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ದತ್ತಪ್ಪ ಅಲ್ಲೂರು ಅವರ ಮುಂದಿನ ಜೀವನ ಸುಖ, ಶಾಂತಿ ಮತ್ತು ಆರೋಗ್ಯದಿಂದ ಕೂಡಿರಲಿ ಎಂದು ಶುಭ ಹಾರೈಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಹಿರಿಯ ಶಿಕ್ಷಕ ರಾಮೇಶ ದೇಸಾಯಿ, ತಾಲೂಕಿನ ವಿವಿಧ ಶಾಲೆಗಳಲ್ಲಿ ಉತ್ತಮ ಸೇವೆ ಸಲ್ಲಿಸಿರುವ ದತ್ತಪ್ಪ ಅಲ್ಲೂರು ಅವರು ದದ್ದಲ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುಖ್ಯಗುರುಗಳಾಗಿ ಕಾರ್ಯನಿರ್ವಹಿಸಿ ಶಾಲೆಯ ಶೈಕ್ಷಣಿಕ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಶ್ರಮಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಶಾಲೆಯ ಅತಿಥಿ ಶಿಕ್ಷಕರಾದ ಮದ್ರಿ ಹನುಮಂತ್ರಾಯ ಮಾತನಾಡಿ, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಅತಿಥಿ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ದತ್ತಪ್ಪ ಅಲ್ಲೂರು ಅವರು ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಸರ್ಕಾರಿ ನೌಕರರಿಗೆ ನಿವೃತ್ತಿ ಸಹಜವಾಗಿದ್ದು, ನಿವೃತ್ತಿಯ ಬಳಿಕವೂ ಸಮಾಜ ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ನಿವೃತ್ತ ಮುಖ್ಯಗುರುಗಳಾದ ವಿದ್ಯಾರಣ್ಯ, ಯಮನಪ್ಪ, ಮಲ್ಲಿಕಾರ್ಜುನಗೌಡ ಮಾಲಿಪಾಟೀಲ್, ಕಾತರಕಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಚಿಕಟ್ನಿಕೊಲ್ ರಾಮೇಶ ನಾಯಕ, ಉಪಾಧ್ಯಕ್ಷೆ ಚನ್ನಮ್ಮ, ಅತಿಥಿ ಶಿಕ್ಷಕಿ ಸಾವಿತ್ರಿ, ಮಾಜಿ ಗ್ರಾಪಂ ಸದಸ್ಯರಾದ ದೇವೇಶ ನಾಯಕ, ದೊಡ್ಡ ಮಲ್ಲೇಶ್, ದಾಸರು ವೆಂಕಟೇಶ್, ಹೊಸೂರು ಹುಸೇನಿ, ಮೊಟ್ಲು ಮಹಾದೇವ, ಗೌಡ್ರು ಮಾರೆಣ್ಣ, ರಾಚಯ್ಯ, ಅರೋಲಿ ರಾಮಯ್ಯ, ಸಣ್ಣ ವೀರೇಶ ಮದಕಲ್, ಮೊಟ್ಲ ಈರಪ್ಪ, ಪತ್ರಕರ್ತ ಈರಪ್ಪ ದದ್ದಲ್, ಹಳೆ ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರು, ಊರಿನ ಹಿರಿಯರು, ಶಾಲೆಯ ಮಕ್ಕಳು ಹಾಗೂ ಅಡುಗೆ ಸಿಬ್ಬಂದಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಶಿಕ್ಷಕಿ ಸಾವಿತ್ರಿ ಸ್ವಾಗತಿಸಿ, ವಂದಿಸಿದರು.

## ಹೊಸೂರು ಗ್ರಾಮದ ನರಸಮ್ಮ ಕಾಣೆ: ಪತ್ತೆಗೆ ಪೊಲೀಸರ ಮನವಿ

ಧೈರ್ಯದ ದಾರಿ

**ರಾಯಚೂರು ಜುಲೈ 31:** ರಾಯಚೂರು ಗ್ರಾಮೀಣ ಪೊಲೀಸ ಠಾಣೆಯ ವ್ಯಾಪ್ತಿಯ ಹೊಸೂರು ಗ್ರಾಮದ ನಿವಾಸಿಯಾದ ನರಸಮ್ಮ ಗಂಡ ನರಸಿಂಹಲು (36) ಎಂಬ ಮಹಿಳೆಯು ಜೂನ್ 12ರ ಬೆಳಿಗ್ಗೆ 11.30ರ ಸುಮಾರಿಗೆ ತನ್ನ ಮಗನನ್ನು ಶಾಲೆಯಿಂದ ಕರೆದುಕೊಂಡು ಬರುತ್ತೇನೆಂದು ತಮ್ಮ ಮನೆಯಿಂದ ಹೊರಗಡೆ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಠಾಣಾ ಗುನ್ನೆ ನಂ: 129/2026 ಕಲಂ ಮಹಿಳೆ ಕಾಣೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.
ಚಹರೆ ಪಟ್ಟಿ: ವಯಸ್ಸು 36 ವರ್ಷ, ಎತ್ತರ ಅಂದಾಜು 5.0 ಅಡಿ, ಉದ್ಯೋಗ ಕೂಲಿ, ಸಾಧಾರಣ ಮೈಕಟ್ಟು, ಗೋದಿ ಮೈ ಬಣ್ಣ, ದುಂಡು ಮುಖ, ಕಪ್ಪು ಕೂದಲು ಧರಿಸಿದ್ದು, ಹಸಿರು ಬಣ್ಣದ ಹೂವಿನ ಚಿತ್ರವುಳ್ಳ ಸೀರೆ, ಕಪ್ಪು ಬಣ್ಣದ ಕುಪ್ಪಸ ಧರಿಸಿದ್ದಾಳೆ.
ಈ ಮೇಲಿನ ಚಹರೆಯುಳ್ಳ ಮಹಿಳೆ ಬಗ್ಗೆ ಮಾಹಿತಿ ಸಿಕ್ಕಲ್ಲಿ ಪಿ.ಎಸ್.ಐ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803850, ಸಿಪಿಐ ಗ್ರಾಮೀಣ ವೃತ್ತ ರಾಯಚೂರು: 9480803832, ಡಿಎಸ್ಪಿ



ರಾಯಚೂರು:9480803820, ರಾಯಚೂರು ಕಂಟ್ರೋಲ್ ರೂಮ್: 08532-235635ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾದಕವಸ್ತು ಮಾರಾಟ ಯತ್ನ ಪ್ರಕರಣ: ಎಂಡಿಎಂಎ ಸಹಿತ ಆರೋಪಿ ಸೆರೆ



**ಬೆಳ್ತಂಗಡಿ** : ಮಾದಕವಸ್ತು ಮಾರಾಟ ಮಾಡಲು ಯತ್ನಿಸುತ್ತಿದ್ದ ವೇಳೆ ಬೆಳ್ತಂಗಡಿ ಪೊಲೀಸರು ಕಾರ್ಯಾಚರಣೆ ನಡೆಸಿ ಗಾಂಜಾ ಮತ್ತು ಎಂಡಿಎಂಎ ವಶಪಡಿಸಿಕೊಂಡಿದ್ದು, ಓರ್ವ ಆರೋಪಿಯನ್ನು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಕುವೆಟ್ಟು ಗ್ರಾಮದ ಅನ್ಸಾರ್(21) ಎಂದು ಪೊಲೀಸರು ತಿಳಿಸಿದ್ದಾರೆ.

ಬೆಳ್ತಂಗಡಿ ಪೊಲೀಸರು ಜುಲೈ 29ರಂದು ರಾತ್ರಿ ರೌಂಡ್ಸ್ ಕರ್ತವ್ಯದಲ್ಲಿದ್ದ ವೇಳೆ ಪಿಲಿಚಂಡಿಕಲ್ಲು ಪ್ರದೇಶದ ಖಾಸಗಿ ಕಟ್ಟಡದ ಮುಂಭಾಗದಲ್ಲಿ ಆಟೋ ರಿಕ್ಷಾ ಬಳಿ ಅನುಮಾನಾಸ್ಪದವಾಗಿ ನಿಂತಿದ್ದ ವ್ಯಕ್ತಿಯೊಬ್ಬ ಪೊಲೀಸ್ ಜೀಪನ್ನು ಕಂಡು ತಪ್ಪಿಸಿಕೊಳ್ಳಲು ಪ್ರಯತ್ನಿಸುವಾಗ ಹಿಡಿದು ವಿಚಾರಣೆ ನಡೆಸಿದಾಗ ತನ್ನ ಹೆಸರು ಅನ್ಸಾರ್ ಎಂದು ತಿಳಿಸಿದ್ದು, ಬಳಿಕ ಮತ್ತಷ್ಟು ವಿಚಾರಣೆ ನಡೆಸಿದಾಗ ಕುವೆಟ್ಟು ಗ್ರಾಮದ ಆಲಾದಿಕೊಟ್ಟಿಗೆ ನಿವಾಸಿ ಹಮ್ಜತ್ ಕರಾರ್ (31) ಎಂಬಾತನಿಗೆ 20 ಸಾವಿರ ರೂ. ಮುಂಗಡ ಹಣ ನೀಡಿ ಗಾಂಜಾ ಖರೀದಿಸಿ ಹೆಚ್ಚಿನ ಹಣಕ್ಕೆ ಮಾರಾಟ ಮಾಡಲು ಯತ್ನಿಸುತ್ತಿರುವುದಾಗಿ ತಿಳಿಸಿದ್ದಾನೆ. ಹಮ್ಜತ್ ಕರಾರ್ ಕಾರಿನಲ್ಲಿ ಬಂದು 500 ಗ್ರಾಂ ಗಾಂಜಾವನ್ನು ನೀಡಿದ್ದು, ಪೊಲೀಸರು ಬರುತ್ತಿರುವುದನ್ನು ಕಂಡು ಕಾರನ್ನು ಬಿಟ್ಟು ಪರಾರಿಯಾಗಿರುವುದಾಗಿ ತಿಳಿಸಿದ್ದಾನೆ. ಬಳಿಕ ಕಾರನ್ನು ತಪಾಸಣೆ ನಡೆಸಿದಾಗ ಕಾರಿನೊಳಗೆ 7.60 ಲಕ್ಷ ರೂ. ಮೌಲ್ಯದ ಎಮ್.ಡಿ.ಎಮ್.ಎ ಪತ್ತೆಯಾಗಿದೆ.

ಆರೋಪಿ ಅನ್ಸಾರ್ ನನ್ನು ತಪಾಸಣೆ ಮಾಡಿದಾಗ ಆತನ ಬಳಿ ಸುಮಾರು 1,498 ರೂ. ಮೌಲ್ಯದ 20 ಗ್ರಾಂ ಗಾಂಜಾ, 30 ಸಾವಿರ ಮೌಲ್ಯದ ಒಂದು ಮೊಬೈಲ್, 200 ರೂಪಾಯಿ ಮೌಲ್ಯದ ಇತರ ವಸ್ತುಗಳು ಪತ್ತೆಯಾಗಿದೆ.

ಪೊಲೀಸರು ಗಾಂಜಾ, ಒಆಒಂ, ಕಾರು, ಆಟೋ ರಿಕ್ಷಾ, ಮೊಬೈಲ್ ಫೋನ್ ಸೇರಿ ಒಟ್ಟು 15 ಲಕ್ಷ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಎನ್‌ಡಿಪಿಎಸ್ ಕಾಯ್ದೆಯ ಕಲಂ 8(ಅ), 20(ಛ)(ು)(ಂ) ಹಾಗೂ 274ರ ಅಡಿಯಲ್ಲಿ ಹಮತ್ ಕರಾರ್ ಮತ್ತು ಅನ್ಸಾರ್ ವಿರುದ್ಧ ಜು.29 ರಂದು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಆರೋಪಿ ಅನ್ಸಾರ್ ನನ್ನು ಬೆಳ್ತಂಗಡಿ ಪೊಲೀಸರು ಬಂಧಿಸಿ ನ್ಯಾಯಾಧೀಶರ ಮನೆಗೆ ಜು.30 ರಂದು ಸಂಜೆ ಹಾಜರುಪಡಿಸಿದ್ದು ಆರೋಪಿಗೆ ನ್ಯಾಯಾಂಗ ಬಂಧನ ವಿಧಿಸಲಾಗಿದೆ.

ದುಬೈಗೆ ಹೋಗಬೇಕಾದವ ಜೈಲಿಗೆ: ಗಾಂಜಾ ಮತ್ತು ಎಮ್.ಡಿ.ಎಮ್.ಎ ಮಾರಾಟ ಮಾಡಲು ಯತ್ನಿಸಿ ಬೆಳ್ತಂಗಡಿ

ಪೊಲೀಸರ ಕೈಗೆ ಸಿಕ್ಕಿಬಿದ್ದ ಆರೋಪಿ ಅನ್ಸಾರ್ ಜು.30 (ಇಂದು) ಸಂಜೆ ದುಬೈ ಉದ್ಯೋಗಕ್ಕಾಗಿ ಹೊಗಲು ತಯಾರಿ ಮಾಡಿದ್ದ ಎಂದು ತಿಳಿದು ಬಂದಿದೆ. ಆದರೆ ಮಾದಕವಸ್ತು ಪ್ರಕರಣದಲ್ಲಿ ಸಿಕ್ಕಿಬಿದ್ದು ಸಂಜೆ ಜೈಲು ಪಾಲಾಗುವಂತಾಗಿದೆ.

ಬೆಳ್ತಂಗಡಿ ಉಪವಿಭಾಗ ಡಿವೈಎಸ್ಪಿ ರೋಹಿನಿ.ಸಿ.ಕೆ ಮತ್ತು ಬೆಳ್ತಂಗಡಿ ವೃತ್ತ ನಿರೀಕ್ಷಕ ರವಿ.ಬಿ.ಎಸ್ ಮಾರ್ಗದರ್ಶನ ದಲ್ಲಿ ಬೆಳ್ತಂಗಡಿ ಸಬ್ ಇನ್ಸ್‌ಪೆಕ್ಟರ್ ಆನಂದ್.ಎಂ ಮತ್ತು ಸಿಕಂದರ್ ಪಾಷ ನೇತೃತ್ವದಲ್ಲಿ ಸಿಬ್ಬಂದಿ ಸತೀಶ್ ನಾಯ್ಕ ಪ್ರಕಾಶ್ ಪೂಜಾರಿ, ಶ್ರೀನಿವಾಸ್, ಹನುಮಂತ, ನಂದ, ಜಗದೀಶ್ ಅತ್ತಾಜೆ, ಪ್ರಮೋದ್, ದುಂಡಪ್ಪ ಪೂಜಾರಿ, ಶ್ರೀನಿವಾಸ್, ಚಾಲಕ ಸತೀಶ್ ಹಾಗೂ ಸೋಕೋ ತಂಡದ ಕಾವ್ಯಶ್ರೀ, ಅರ್ಪಿತಾ ಕಾರ್ಯಾಚರಣೆಯಲ್ಲಿ ಭಾಗವಹಿಸಿದರು.

# ಸ್ಥಳೀಯ ಕಬ್ಬು ಕಟಾವು ಯಂತ್ರಕ್ಕೆ ಆದ್ಯತೆ ನೀಡಿ



**ಬೀದರ್: ಜು.31:**ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಸ್ಥಳೀಯ ಕಬ್ಬು ಕಟಾವು ಯಂತ್ರಗಳಿಗೆ ಆದ್ಯತೆ ನೀಡಬೇಕು ಎಂದು ಕಲಬುರಗಿ ಹಾಗೂ ಬೀದರ್ ಜಿಲ್ಲಾ ಕಬ್ಬು ಕಟಾವು ಯಂತ್ರಗಳ ಮಾಲೀಕರ ಸಂಘ ಆಗ್ರಹಿಸಿದೆ.

ಸಂಘದ ಪದಾಧಿಕಾರಿಗಳು ನಗರದಲ್ಲಿ ಈ ಕುರಿತು ಜಿಲ್ಲಾಧಿಕಾರಿಗೆ ಬರೆದ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಅವರಿಗೆ ಸಲ್ಲಿಸಿದರು.

ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಕಬ್ಬು ಕಟಾವು ಹಂಗಾಮು ವೇಳೆ ಹೊರ ರಾಜ್ಯ ಹಾಗೂ ಬೇರೆ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯ ಕಬ್ಬು ಕಟಾವು ಯಂತ್ರಗಳು ಬರುತ್ತಿವೆ ಎಂದು ಹೇಳಿದರು.

ಹೊರ ರಾಜ್ಯ ಹಾಗೂ ಬೇರೆ ಜಿಲ್ಲೆಗಳ ಯಂತ್ರಗಳಿಗೆ ಆದ್ಯತೆ ಕೊಡುತ್ತಿರುವ ಕಾರಣ ಯಂತ್ರ ಖರೀದಿಸಿ, ಸಾಲ ಮಾಡಿ ಜೀವನ ನಡೆಸುತ್ತಿರುವ ಜಿಲ್ಲೆಯ ಯಂತ್ರಗಳ ಮಾಲೀಕರಿಗೆ ಕೆಲಸ ಕೊರತೆ ಹಾಗೂ ಆರ್ಥಿಕ ಸಂಕಷ್ಟ ಉಂಟಾಗುತ್ತಿದೆ. ಇದರಿಂದ ಯಂತ್ರಗಳ ನಿರ್ವಹಣೆ, ಬ್ಯಾಂಕ್ ಸಾಲ ಮರು ಪಾವತಿ ಹಾಗೂ ಕಾರ್ಮಿಕರ ಸಂಬಳ ಕೊಡಲು ಸಮಸ್ಯೆ ಎದುರಿಸಬೇಕಾಗಿದೆ ಎಂದು ಹೇಳಿದರು.

ರೈತರ ಹಿತ ಹಾಗೂ ಕಬ್ಬು ಮಾಲೀಕರ ಜೀವನೋಪಾಯ ಗಮನದಲ್ಲಿ ಇಟ್ಟುಕೊಂಡು, ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳ ಕಬ್ಬು ಕಟಾವು ಯಂತ್ರಗಳಿಗೆ ಮೊದಲ ಆದ್ಯತೆ ಕೊಡಬೇಕು. ಸ್ಥಳೀಯ ಯಂತ್ರಗಳ ಲಭ್ಯತೆ ಇರುವವರೆಗೆ ಹೊರ ರಾಜ್ಯ ಹಾಗೂ ಬೇರೆ ಜಿಲ್ಲೆಗಳ ಯಂತ್ರಗಳಿಗೆ ಅನುಮತಿ ಕೊಡಬಾರದು ಎಂದು ಒತ್ತಾಯಿಸಿದರು.

ಸ್ಥಳೀಯ ಕಬ್ಬು ಕಟಾವು ಯಂತ್ರಗಳಿಗೆ ಆದ್ಯತೆ ನೀಡುವಂತೆ ಆದೇಶ ಹೊರಡಿಸಿ, ಅದನ್ನು ಜಾರಿಗೆ ತರಬೇಕು ಎಂದು ಬೇಡಿಕೆ ಮಂಡಿಸಿದರು.

ಸಂಘದ ಕಲಬುರಗಿ ಜಿಲ್ಲಾ ಗೌರವಾಧ್ಯಕ್ಷ ಭೀಮಾಶಂಕರ ಎಸ್. ಪಾಟೀಲ, ಅಧ್ಯಕ್ಷ ಶಾಂತಗೌಡ ಕೆ. ಪಾಟೀಲ, ಕಾರ್ಯದರ್ಶಿ ಬಾಬಾಗೌಡ ಎಸ್. ಬಿರಾದಾರ, ಬೀದರ್ ಜಿಲ್ಲಾ ಅಧ್ಯಕ್ಷ ಅನಿಲಕುಮಾರ ಪನ್ನಾಳೆ, ರಾಜುರೆಡ್ಡಿ ಶೇರಿಕಾರ್ ಬನ್ನಳ್ಳಿ, ನಾಗೇಶ್ ಬೆಳಕೇರೆ, ಸೂರ್ಯಕಾಂತ ವಗದಾಳ್, ಸಂಕೇತ್ ಸಜ್ಜನ್, ಮುಷ್ತಾಕ್ ರಾಜೇಶ್ವರ, ಬಸವರಾಜ ಹಲಬರ್ಗಾ, ನಾಗ ರೆಡ್ಡಿ ಉಡಬಾಳ್ ಮತ್ತಿತರರು ಇದ್ದರು.

# ಒಂದೇ ಒಂದು ಕ್ಲಿಕ್‌ನಲ್ಲಿ ರೋಗಿಗಳ ಆರೋಗ್ಯ ವಿವರ ಲಭ್ಯ: ಸರಕಾರಿ ಆಸ್ಪತ್ರೆಗಳ ಡಿಜಿಟಲೀಕರಣ: ಸಚಿವ ಯು.ಟಿ. ಖಾದರ್

**ಮಂಗಳೂರು:** ಆಧುನಿಕ ತಂತ್ರಜ್ಞಾನಕ್ಕೆ ಪೂರಕವಾಗಿ ರಾಜ್ಯದ ಆರೋಗ್ಯ ಕ್ಷೇತ್ರವನ್ನು ಕೂಡ ಡಿಜಿಟಲೀಕರಣ ಮಾಡುವ ಯೋಜನೆ ರೂಪಿಸಲಾಗಿದೆ.ಅದರಂತೆ ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳನ್ನು ಸಂಪೂರ್ಣವಾಗಿ ಡಿಜಿಟಲೀಕರಣ ಮಾಡಲಾಗುವುದು ಎಂದು ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಹೇಳಿದ್ದಾರೆ.

ನಗರದ ಸರ್ಕ್ಯೂಟ್ ಹೌಸ್‌ನಲ್ಲಿ ಗುರುವಾರ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ 40 ಆಸ್ಪತ್ರೆಗಳಲ್ಲಿ ಹೈಸ್ಪೀಡ್ ಬ್ರಾಡ್‌ಬ್ಯಾಂಡ್ ಇಂಟರ್‌ನೆಟ್ ಸಂಪರ್ಕ ಕಲ್ಪಿಸಲಾಗುತ್ತಿದೆ. 40 ಕೋ.ರೂ. ಮೊತ್ತದ ಯೋಜನೆ ಇದಾಗಿದೆ ಎಂದರು.

ಡಿಜಿಟಲೀಕರಣ ಮಾಡುವುದರಿಂದ ರೋಗಿಗಳ ಸಂಪೂರ್ಣ ಆರೋಗ್ಯ ವಿವರವನ್ನು ಒಂದೇ ಒಂದು ಕ್ಲಿಕ್‌ನಲ್ಲಿ ಪರಿಶೀಲಿಸಿ ಸೂಕ್ತ ಚಿಕಿತ್ಸೆ ನೀಡಲು ವೈದ್ಯರಿಗೆ ಅನುಕೂಲವಾಗಲಿದೆ. ರೋಗಿಯು ಒಮ್ಮೆ ಆಸ್ಪತ್ರೆಗೆ ಹೋದರೆ ಬಿಪಿ, ಶುಗರ್, ಲ್ಯಾಬ್ ಹಾಗೂ ಔಷಧಗಳ ವಿವರ ಡಿಜಿಟಲ್ ರೂಪದಲ್ಲಿ ದಾಖಲಾಗುತ್ತದೆ. ಮುಂದೆ ಬೇರೆ ಆಸ್ಪತ್ರೆಗೆ ಹೋದರೂ ಕೂಡ ಸಂಪೂರ್ಣ ವೈದ್ಯಕೀಯ ವಿವರ ವೈದ್ಯರಿಗೆ ಲಭ್ಯವಾಗಲಿದೆ ಎಂದು ಖಾದರ್ ಮಾಹಿತಿ ನೀಡಿದರು.

ಸರಕಾರಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ಪಡೆದು ಡಿಸ್ಚಾರ್ಜ್ ಆಗುವಾಗ ರೋಗಿಗಳಿಗೆ ಶೂನ್ಯ ಪಾವತಿಯ ಬಿಲ್ ನೀಡುವ ಚಿಂತನೆ ಇದೆ. ಸರಕಾರ ರೋಗಿಯ ಚಿಕಿತ್ಸೆಗೆ ಎಷ್ಟು ವೆಚ್ಚ ಮಾಡಿದೆ ಎಂಬ ಅರಿವು ಕೂಡ ರೋಗಿಗಳು ಅಥವಾ ಅವರ ಕುಟುಂಬಸ್ಥರಿಗೆ ಸಿಗುತ್ತದೆ ಎಂದರು.

ತಾಲೂಕು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳಿಗೆ ಉತ್ತಮ ತುರ್ತು ಚಿಕಿತ್ಸೆ ನೀಡಲು ಟೆಲಿ-ಐಸಿಯು ವ್ಯವಸ್ಥೆಯನ್ನೂ ಜಾರಿಗೆ ತರಲಾಗುವುದು. ಗ್ರಾಮೀಣ ಭಾಗದ ಆಸ್ಪತ್ರೆಗಳ ನರ್ಸ್‌ಗಳಿಗೆ ಸೂಕ್ತ ತರಬೇತಿ ನೀಡಿ, ಉನ್ನತ ಮಟ್ಟದ ತಜ್ಞ ವೈದ್ಯರೊಂದಿಗೆ ಟೆಲಿ-ಸಂಪರ್ಕ ಏರ್ಪಡಿಸಿ ಐಸಿಯು ಚಿಕಿತ್ಸೆ ನೀಡುವ ವ್ಯವಸ್ಥೆ ಮಾಡಲಾಗುವುದು. ಅದಕ್ಕಾಗಿ 30 ಕೋ.ರೂ. ಅನುದಾನ ಮಂಜೂರಾಗಿದೆ ಎಂದ ಖಾದರ್, ತಾಲೂಕು ಮಟ್ಟ ದಲ್ಲೇ ನವಜಾತ ಶಿಶುಗಳ ತುರ್ತು ಆರೈಕೆ ಮತ್ತು ಮಕ್ಕಳ ಚಿಕಿತ್ಸಾ ಘಟಕಗಳನ್ನು ಬಲಪಡಿಸಲಾಗುವುದು. ಇದರಿಂದ ಸಣ್ಣ ಪುಟ್ಟ ಚಿಕಿತ್ಸೆಗೆ ಜಿಲ್ಲಾಸ್ಪತ್ರೆ ಅಥವಾ ಖಾಸಗಿ ಆಸ್ಪತ್ರೆಗಳಿಗೆ ಹೋಗುವುದನ್ನು ತಪ್ಪಿಸಬಹುದಾಗಿದೆ ಎಂದರು.

ಆಲೋಪತಿ ಚಿಕಿತ್ಸೆಯ ಜೊತೆಗೆ ಆಯುರ್ವೇದ, ಯೋಗ, ಯುನಾನಿ, ಸಿದ್ಧ ಹಾಗೂ ಹೋಮಿಯೋಪತಿ (ಆಯುಷ್) ಚಿಕಿತ್ಸೆ ಸಿಗುವಂತಹ ಉಳ್ಳಾಲ ಮಾದರಿಯ ಆಸ್ಪತ್ರೆಯನ್ನು ರಾಜ್ಯಾದ್ಯಂತ ಜಾರಿಗೆ ತರಲಾಗುವುದು. ಹೊಸದಾಗಿ ನಿರ್ಮಿಸುವ ಎಲ್ಲ ತಾಲೂಕು ಆಸ್ಪತ್ರೆಗಳ ಕಟ್ಟಡದ ಅಂದಾಜು ಪಟ್ಟಿಯಲ್ಲೇ ಆಯುಷ್ ಆಸ್ಪತ್ರೆ ಕಟ್ಟಡವನ್ನು ಸೇರಿಸಿ ನಿರ್ಮಾಣ ಮಾಡುವ ಚಿಂತನೆ ಇದೆ ಎಂದು ಯು.ಟಿ.ಖಾದರ್ ಹೇಳಿದರು.



ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಹೊಟೇಲ್‌ಗಳು, ರೆಸ್ಟೋರೆಂಟ್‌ಗಳಲ್ಲಿ ಕಡ್ಡಾಯವಾಗಿ ಕುಡಿಯಲು ಬಿಸಿ ನೀರು ಪೂರೈಸಲು ಶೀಘ್ರ ಅಧಿಕೃತ ಆದೇಶ ಹೊರಡಿಸಲಾಗುವುದು ಎಂದು ಸಚಿವ ಯು.ಟಿ. ಖಾದರ್ ಹೇಳಿದರು.

ಆಹಾರದಲ್ಲಿ ಕಲರ್, ಅಜಿನೊಮೋಟೊ ಹಾಕಿದರೆ ಕಠಿಣ ಕ್ರಮ

ರಾಜ್ಯದ ಹೊಟೇಲ್, ಆಹಾರ ತಯಾರಿಕಾ ಘಟಕಗಳಲ್ಲಿ ಪದಾರ್ಥಗಳಿಗೆ ಅಜಿನೊಮೋಟೊ ಹಾಗೂ ಅಪಾಯಕಾರಿ ರಾಸಾಯನಿಕಗಳು ಅಥವಾ ಕೃತಕ ಬಣ್ಣ ಬಳಕೆ ಮಾಡಿದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗು ವುದು. ಆಹಾರ ಸ್ಯಾಂಪಲ್ ಪರೀಕ್ಷೆಯ ವರದಿ ಶೀಘ್ರ ದೊರೆಯುವ ಉದ್ದೇಶದಿಂದ ಪಿಪಿಪಿ ಮಾದರಿಯಲ್ಲಿ ಉನ್ನತ ಮಟ್ಟದ ಆಹಾರ ಪರೀಕ್ಷಾ ಪ್ರಯೋಗಾಲಯಗಳನ್ನು ಸ್ಥಾಪಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಯು.ಟಿ.ಖಾದರ್ ನುಡಿದರು.

'ಕರಾವಳಿಯ ಸಂಸ್ಕೃತಿಗೆ ಕಪ್ಪುಚುಕ್ಕೆ

ಲೋಕಸಭೆಯ ವಿಪಕ್ಷ ನಾಯಕ ಹಾಗೂ ಎಐಸಿಸಿ ವರಿಷ್ಠ ರಾಹುಲ್ ಗಾಂಧಿ ಮತ್ತವರ ಕುಟುಂಬದ ಬಗ್ಗೆ ಶಾಸಕ ಯಶಪಾಲ್ ಸುವರ್ಣ ನಿಕೃಷ್ಟವಾಗಿ ಮಾತನಾಡಿದ್ದಾರೆ. ಆದರೆ ಆ ಶಾಸಕ ರಾಹುಲ್ ಗಾಂಧಿಯ ಕಾಲಿನ ಕಿರು ಬೆರಳಿಗೂ ಸಮನಲ್ಲ. ಜನಪ್ರತಿನಿಧಿಯೊಬ್ಬ ಇಂತಹ ಕೀಳು ಮಟ್ಟದ ನೀಡುವುದು ಕರಾವಳಿಯ ಸಂಸ್ಕೃತಿ, ಪರಂಪರೆಗೆ ಕಪ್ಪುಚುಕ್ಕೆ. ಅವರಲ್ಲಿ ತಾಲಿಬಾನ್ ಡಿಎನ್‌ಎ ಇರಬೇಕು ಎಂದು ಯು.ಟಿ. ಖಾದರ್ ವ್ಯಂಗ್ಯವಾಡಿದರು.

ಸುದ್ದಿಗೋಷ್ಠಿಯಲ್ಲಿ ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷ ಮಮತಾ ಗಟ್ಟಿ, ಕಾಂಗ್ರೆಸ್ ಮುಖಂಡರಾದ ಎಂ.ಎಸ್. ಮುಹಮ್ಮದ್, ಕೆ.ಕೆ. ಶಾಹುಲ್ ಹಮೀದ್, ಅಪ್ಪಿ ಮತ್ತಿತರರು ಉಪಸ್ಥಿತರಿದ್ದರು

# ಸಮಾನತೆಯ ಕ್ರಾಂತಿಗೆ ಕೈಜೋಡಿಸಿದ ಹಡಪದ ಅಪ್ಪಣ್ಣ

**ಶಹಾಬಾದ:** ಸಮಾಜದಲ್ಲಿ ಸಮಾನತೆ ತರುವ ಸಲುವಾಗಿ ಬಸವಣ್ಣನವರು ಅನುಭವ ಮಂಟಪವನ್ನು ಸ್ಥಾಪಿಸಿದರು. ಬಸವಣ್ಣನವರ ಕ್ರಾಂತಿಯ ಪ್ರಭಾವಕ್ಕೆ ಒಳಗಾಗಿ ಹಡಪದ ಅಪ್ಪಣ್ಣ ಅವರು ಸಹ ಅನುಭವ ಮಂಟಪವನ್ನು ಸೇರಿಕೊಂಡು ಸಾಮಾಜಿಕ ಕ್ರಾಂತಿಗೆ ಧುಮುಕಿದರು ಎಂದು ಹಡಪದ ಅಪ್ಪಣ್ಣ ಮಠದ ಬಾಲಬ್ರಹ್ಮಚಾರಿ ರಾಜಮಹಾಸ್ವಾಮಿಗಳು ಹೇಳಿದರು.

ಅವರು ಬುಧವಾರ ನಗರದ ಬಿಜೆಪಿ ಕಾರ್ಯಾಲಯದಲ್ಲಿ ಆಯೋಜಿಸಲಾದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಉದ್ಘಾಟಿಸಿ ಮಾತನಾಡಿದರು.

12ನೇ ಶತಮಾನದಲ್ಲಿ ಕ್ರಾಂತಿಕಾರಿ ಬಸವಣ್ಣನವರ ನೇತೃತ್ವದಲ್ಲಿ ಸಾಮಾಜಿಕ ಕ್ರಾಂತಿಗಳು ನಡೆದವು. 850 ವರ್ಷಗಳ ಹಿಂದೆಯೇ ಬಸವಣ್ಣನವರಿಂದ ಪ್ರಭಾವಿತರಾಗಿ ಅವರ ಆದರ್ಶ, ಗುಣ ತತ್ವಗಳನ್ನು ಪಾಲಿಸಿದರು. ಸಮಾಜದ ಎಲ್ಲ ವರ್ಗದವರಿಗೂ ಶಿಕ್ಷಣವನ್ನು ಕೊಡಿಸುವ ಮೂಲಕ ಸಮಾನತೆಯನ್ನು ತರಲು ಸಾಕಷ್ಟು ಹೋರಾಟಗಳನ್ನು ಅಪ್ಪಣ್ಣ ಮಾಡಿದರು ಎಂದರು.

ಅಪ್ಪಣ್ಣ ಅವರು ಬಸವಣ್ಣನವರ ಆಪ್ತರಾಗಿ ಕೆಲಸ ಮಾಡುತ್ತಿದ್ದರು. ಬಸವಣ್ಣನವರ ಪ್ರೀತಿ ಪಾತ್ರರಾಗಿ ಕೆಲಸವನ್ನು ನಿರ್ವಹಿಸಿದಂತಹ ಕೀರ್ತಿ ಅಪ್ಪಣ್ಣ ಅವರಿಗೆ ಸಲ್ಲುತ್ತದೆ. ಬಸವಣ್ಣನವರ ಆಧ್ಯಾತ್ಮಿಕ, ಸಾಮಾಜಿಕ ಕೆಲಸ ಕಾರ್ಯಗಳಿಗೆ ಕೈ ಜೋಡಿಸಿ ಸಹಾಯ ಮಾಡುತ್ತಿದ್ದರು. ಬಸವಣ್ಣನವರಿಗೆ ಆಪ್ತ ಸಹಾಯಕರಾಗಿ ಅಪ್ಪಣ್ಣ ಅವರು ಕೆಲಸ ಮಾಡುತ್ತಿದ್ದ ರೀತಿಯನ್ನು ಕಂಡು ಬಿಜ್ಜಳ ಮಹರಾಜನು ತಮ್ಮ ಆಪ್ತರಾಗಿ ಕೆಲಸವನ್ನು ಮಾಡುವಂತೆ ಆಹ್ವಾನವನ್ನು ಅಪ್ಪಣ್ಣ ಅವರಿಗೆ ನೀಡಿದರು. ಆದರೆ, ಅಪ್ಪಣ್ಣ ಅವರು ಬಿಜ್ಜಳ ರಾಜನ ಆಹ್ವಾನವನ್ನು ನಿರಾಕರಿಸಿ ಬಸವಣ್ಣ ಅವರ ಆಪ್ತರಾಗಿ ತಮ್ಮ ಕೆಲಸವನ್ನು



ಮುಂದುವರೆಸಿದಂತಹ ಮಹಾನ್ ವ್ಯಕ್ತಿ ಎಂದು ನೆನೆದರು.

ಬಿಜೆಪಿ ಅಧ್ಯಕ್ಷ ನಿಂಗಪ್ಪ ಹುಳಗೋಳಕರ್, ಕನಕಪ್ಪ ದಂಡಗುಲಕರ್ ಮಾತನಾಡಿದರು.ಬಸವರಾಜ ಬಿರಾದಾರ ನಿರೂಪಿಸಿ, ಸ್ವಾಗತಿಸಿದರು. ದಿನೆ?ಶ ಗೌಳಿ ವಂದಿಸಿದರು. ಈ ಸಂದರ್ಭದಲ್ಲಿ ಮಂಡಲ ಪದಾಧಿಕಾರಿಗಳು, ಹಿರಿಯ ಕಾರ್ಯಕರ್ತರು, ಮಹಾಶಕ್ತಿ ಕೇಂದ್ರ, ಶಕ್ತಿ ಕೇಂದ್ರ ಪ್ರಮುಖರು, ಮೋರ್ಚಾಗಳ, ಪ್ರಕೋಷ್ಠಗಳ ಮತ್ತು ಬೂತಿನ ಪದಾಧಿಕಾರಿಗಳು ಹಡಪದ ಸಮಾಜದ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಗ್ರಾಮೀಣ ಕಲೆ ಮತ್ತು ಸಂಸ್ಕೃತಿಯ ಉಳಿವು ನಮ್ಮೆಲ್ಲರ ಜವಾಬ್ದಾರಿ



**ಕಲಬುರಗಿ:** ನಾಡಿನ ವೈವಿಧ್ಯಮಯ ಸಾಹಿತ್ಯ, ಕಲೆ ಹಾಗೂ ಗ್ರಾಮೀಣ ಭಾಗದ ವಿಶಿಷ್ಟ ಸಂಸ್ಕೃತಿಯನ್ನು ಬೆಳೆಸಿ ಮುಂದಿನ ಪೀಳಿಗೆಗೆ ಯಥಾವತ್ತಾಗಿ ತಲುಪಿಸುವುದು ಪ್ರತಿಯೊಬ್ಬರ ಪ್ರಮುಖ ಜವಾಬ್ದಾರಿಯಾಗಿದೆ ಎಂದು ರಂಗ ಕಲಾವಿದ ಸುಭಾಷ್ ಬನ್ನಟ್ಟಿ ಅಭಿಪ್ರಾಯಪಟ್ಟಿದ್ದಾರೆ.

ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಸುವರ್ಣ ಸಭಾ ಭವನದಲ್ಲಿ ಜೇವರ್ಗಿಯ 'ಮಹರ್ಷಿ ಯುವ ಸಮಾಜ ಕಲ್ಯಾಣ ಸಾಂಸ್ಕೃತಿಕ ಸಂಘ' ಜೇವರ್ಗಿ, ಆಯೋಜಿಸಿದ್ದ, ಸಂಸ್ಕೃತಿಕ ಸೌರಭ ಸೇರಿದಂತೆ ಜನಪದ ಸಾಹಿತ್ಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ನಾಟಕ, ಸಂಗೀತ ಕಾರ್ಯಕ್ರಮಗಳು ಹಾಗೂ ರಂಗಾಯಣ ಸಂಸ್ಥೆಗಳ ಮೂಲಕ ರಂಗಭೂಮಿಗೆ ಜೀವ ತುಂಬಲು ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದರು. ಅಳಿವಿನಂಚಿನಲ್ಲಿರುವ ಜಾನಪದ ಕಲೆಗಳನ್ನು ಪ್ರೋತ್ಸಾಹಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸರ್ಕಾರ ತನ್ನ ಜವಾಬ್ದಾರಿಯನ್ನು ನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಹಿಂದಿನ ದಿನಗಳಲ್ಲಿ ಶುಭ ಸಮಾರಂಭಗಳಲ್ಲಿ ಕಲಾವಿದರು ರಾತ್ರಿಯಿಡೀ ಭಜನೆ ಹಾಗೂ ಶೋಭಾನ ಪದಗಳನ್ನು ಹಾಡಿ ಇಡೀ ಊರನ್ನೇ ಸಂಭ್ರಮದಲ್ಲಿ ತೇಲಿಸುತ್ತಿದ್ದರು.

ಆದರೆ ಇಂದು ತಂತ್ರಜ್ಞಾನ ಬೆಳೆದಿದ್ದು, ಮೊಬೈಲ್ ಹಾಗೂ ಸಾಮಾಜಿಕ ಮಾಧ್ಯಮಗಳ ಮೂಲಕ ಗ್ರಾಮೀಣ ಕಲಾ ಪ್ರತಿಭೆಗಳನ್ನು ಜಗತ್ತಿನಾದ್ಯಂತ ಕ್ಷಣಾರ್ಧದಲ್ಲಿ ತಲುಪಿಸುವ ಉತ್ತಮ ಅವಕಾಶ ಲಭ್ಯವಾಗಿದೆ ಎಂದರು.

ಈ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ರಂಗಭೂಮಿ ಮತ್ತು ಚಲನಚಿತ್ರ ಕಲಾವಿದ ಸುಭಾಷ ಬನ್ನಪಟ್ಟಿ, ಶ್ರೀ ಸಾಯಿ ಜನಜಾಗೃತಿ ಕಲಾತಂಡದ ಗಂಗೂಬಾಯಿ ಕವಲಗಿ, ಮಣ್ಣೂರು ಗಂಗಾ ಅಂಗವಿಕಲರ ಸಂಘದ ಕಾರ್ಯದರ್ಶಿ ವೆಂಕಟೇಶ ಮಾಲಿಪಾಟೀಲ್, ರಾಷ್ಟ್ರೀಯ ಪ್ರಶಸ್ತಿ ವಿಜೇತ ಪಾಂಡು ಚಿತ್ತಾಪುರ, ಮುಖ್ಯ ಅತಿಥಿಗಳಾಗಿ ಮನೀಶ್ ಹಾಗೂ ರಾಜು ದೇಶಮುಖ,ಮಹಿಳಾ ಕಲಾವಿದೆ ಸಂಘದ ಅಧ್ಯಕ್ಷೆ ಕಲ್ಪನಾ ಗೋಲ್ಡ್ ಸ್ಮಿತ್, ಆಕಾಶವಾಣಿ ಕಲಾವಿದ ಬಸಯ್ಯ ಗುತ್ತೇದಾರ್, ಸುಭಾಷ್ ಬನ್ನಟ್ಟಿ, ಪಸರ್, ಪಿ.ಆರ್. ಪಾಂಡು, ಮಲ್ಲಿಕಾರ್ಜುನ ಆರ್. ಜಾನೆ ಹಾಗೂ 'ಮಹರ್ಷಿ ಯುವ ಸಮಾಜ ಕಲ್ಯಾಣ ಸಾಂಸ್ಕೃತಿಕ ಸಂಘ' ಜೇವರ್ಗಿ,

ಸಂಸ್ಥೆಯ ಸಂಚಾಲಕರಾದ ರಾಜು ಮುದ್ದಡಗಿ ಸೇರಿದಂತೆ ಹಲವು ಪ್ರಮುಖ ಗಣ್ಯರು ಉಪಸ್ಥಿತರಿದ್ದರು.

# ಗುರುವಿನಿಂದ ಬದುಕು ಆರಂಭ



**ಬೀದರ್: ಜು.31:**ನಮ್ಮ ಬದುಕು ಆರಂಭವಾಗುವುದೇ ಗುರುವಿನಿಂದ ಎಂದು ಹಲಬರ್ಗಾ, ಶಿವಣಿ ಹಾಗೂ ಹೈದರಾಬಾದ್ ಮಠದ ಪೀಠಾಧಿಪತಿ ಡಾ. ಹಾವಗಿಲಿಂಗೇಶ್ವರ ಶಿವಾಚಾರ್ಯ ಹೇಳಿದರು.

ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಗ್ರಾಮದ ರಾಚೋಟೇಶ್ವರ ಸಂಸ್ಥಾನ ಮಠದಲ್ಲಿ ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕದ ವತಿಯಿಂದ ಬುಧವಾರ ಆಯೋಜಿಸಿದ್ದ ಗುರು ಪೂರ್ಣಿಮೆ ಹಾಗೂ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಮನುಷ್ಯನಿಗೆ ಸಂಸ್ಕಾರ ಕೊಟ್ಟು, ಜ್ಞಾನದ ಮೂರ್ತಿ ಆಗಿಸುವವನೇ ಗುರು ಎಂದು ತಿಳಿಸಿದರು.

ಗುರು ಅಜ್ಞಾನ, ಅಂಧಕಾರಗಳನ್ನು ಕಳೆಯುತ್ತಾನೆ. ಮೋಕ್ಷದ ದಾರಿ ತೋರುತ್ತಾನೆ ಎಂದು ತಿಳಿಸಿದರು.

ಗುರುವಿನ ಅನುಗ್ರಹದಿಂದ ಅಸಾಧ್ಯವೂ ಸಾಧ್ಯವಾಗುತ್ತದೆ. ಭವಸಾಗರ ದಾಟಲು ಗುರುವಿನ ಮಾರ್ಗದರ್ಶನ ಅತ್ಯವಶ್ಯಕ ಎಂದು ಹೇಳಿದರು.


ಭೂ ಲೋಕದಲ್ಲಿ ಗುರುವೇ ಶ್ರೇಷ್ಠ. ಅಂತೆಯೇ ಗುರುವನ್ನು ಬ್ರಹ್ಮ, ವಿಷ್ಣು, ಮಹೇಶ್ವರರಿಗೆ ಹೋಲಿಸಲಾಗಿದೆ. ಎಲ್ಲರೂ ಗುರುವಿನ ವಾಣಿ ಆಲಿಸಬೇಕು. ಅವರು ತೋರಿದ ಮಾರ್ಗದಲ್ಲಿ ನಡೆದು ಜೀವನ ಪಾವನ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಪತ್ರಕರ್ತರಾದ ಅಶೋಕ ರಾಜೋಳೆ, ಸಂತೋಷ್ ಬಿ.ಜಿ. ಪಾಟೀಲ, ಜಯರಾಜ ದಾಬಶೆಟ್ಟಿ, ಮಾಣಿಕ ಮರಕಲೆ, ಇಂದ್ರಜೀತ್ ಪಾಂಚಾಳ್, ಪ್ರವೀಣ್, ದಿಲೀಪ್, ಭದ್ರೇಶ್ ಹಾಗೂ ಇತರರನ್ನು ಸನ್ಮಾನಿಸಲಾಯಿತು.

ಧನ್ನೂರ(ಎಚ್) ಠಾಣೆ ಪಿಎಸ್ಐ ರಾಜಕುಮಾರ ಜತಗೊಂಡ ಉದ್ಘಾಟಿಸಿ ಮಾತನಾಡಿದರು. ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಅಧ್ಯಕ್ಷತೆ ವಹಿಸಿದ್ದರು. ಪ್ರಸಾದ ದಾಸೋಹಿ ಗುಂಡಯ್ಯ ಸ್ವಾಮಿ ತರನಳ್ಳಿ ಗುರು ಪೂಜೆ ನೆರವೇರಿಸಿದರು.

ಸೇನೆಯ ಯುವ ಘಟಕದ ಅಧ್ಯಕ್ಷ ಸುದೀಪ್, ಪ್ರಮುಖರಾದ ಗಿರೀಶ್ ಬಿರಾದಾರ, ಬಸವರಾಜ ಕಾರಬಾರಿ, ಅನಿಲ್ ರಾಜಗೀರಾ, ಕಾಶಿನಾಥ ಚಳಕಾಪುರೆ, ಸಂಗಮೇಶ ಮಾರ್ಗೆ, ಸಂಗಮೇಶ ಬಿರಾದಾರ, ಸಂತೋಷ್ ಪಾಟೀಲ, ಅನಿಲ್ ರೆಡ್ಡಿ, ರಾಜು ಕುಂಬಾರ, ಮಹಾರುದ್ರ, ವಿಜಯಕುಮಾರ ಪಾಂಚಾಳ, ರಮೇಶ್ ಸುತಾರ್, ಡಾ. ಪ್ರವೀಣ್, ಡಾ. ಸುಶೀಲಕುಮಾರ, ಮಹೇಶ ಮಠಪತಿ ಮತ್ತಿತರರು ಇದ್ದರು.

# ಆಂಧ್ರಪ್ರದೇಶದ ಕನ್ನಡ ಶಾಲೆಗಳಿಗೆ ಪ್ರಥಮ ಭಾಷೆ ಕನ್ನಡ ಉಚಿತ ಪಠ್ಯಪುಸ್ತಕಗಳು ನೀಡಿಕೆ



**ಬಳ್ಳಾರಿ, ಜು.31:** ಈ ದಿನ ಪೂರ್ವ ವಲಯ ಬಿ ಇ ಓ ಕಾರ್ಯಾಲಯ ಬಳ್ಳಾರಿ ಇವರಿಂದ ಆಂಧ್ರಪ್ರದೇಶದ ಕನ್ನಡ ಶಾಲೆಗಳಿಗೆ ಪ್ರಥಮ ಭಾಷೆ ಉಚಿತ ಕನ್ನಡ ಪಠ್ಯಪುಸ್ತಕ ಗಳನ್ನು ಪೂರೈಸಲಾಯಿತು. ಸಂದರ್ಭದಲ್ಲಿ ಶಿಕ್ಷಣ ಸಂಯೋಜಕರಾದ ಎಂ.ಎಸ್. ಮಂಜುನಾಥ ಸ್ವಾಮಿಯವರು ನಮ್ಮ ಬೇಡಿಕೆಯ ಮೇರೆಗೆ ಸುಮಾರು 7000 ಪಠ್ಯಪುಸ್ತಕಗಳನ್ನು (ಸೆಮಿಸ್ಟರ್ ಭಾಗ ಒಂದು ಮತ್ತು ಎರಡು ) ನೀಡಿದರು. ಈ ಸಂದರ್ಭದಲ್ಲಿ ಆಂಧ್ರಪ್ರದೇಶದ ಕನ್ನಡ ಶಿಕ್ಷಕರ ಸಂಘದ ಅಧ್ಯಕ್ಷರಾದ ಎಂ. ಗಿರಿಜಾಪತಿ ಉಪಾಧ್ಯಕ್ಷರಾದ ಬಿ.ಇರಾಳಪ್ಪ ಅನಂತಪುರ ಜಿಲ್ಲಾ ಕನ್ನಡ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ದೇವರಾಜ್ ನಾಯಕ್ ಜಿಲ್ಲಾ ಉಪಾಧ್ಯಕ್ಷರಾದ

ಎಂ.ಸೂರ್ಯನಾರಾಯಣ ಕಾರ್ಯದರ್ಶಿ ಎ.ಅಯ್ಯಣ್ಣ ಸರ್ ಶಿಕ್ಷಕರು ಉಪಸ್ಥಿತರಿದ್ದರು ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರಕ್ಕೆ ಬಿ ಇ ಓ ಪೂರ್ವ ವಲಯ ಎಲ್ಲಾ ಸಿಬ್ಬಂದಿಯವರಿಗೂ ಆಂಧ್ರಪ್ರದೇಶದ ಕನ್ನಡ ಶಿಕ್ಷಕರ ಸಂಘದ ಪರವಾಗಿ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸಲಾಯಿತು.

# ಸ್ವತಂತ್ರ್ಯ ಹೋರಾಟಗಾರರ ಭಾವಚಿತ್ರಗಳ ವಿತರಣೆ



**ಬಳ್ಳಾರಿ, ಜು.31:** ಕಂಪ್ಲಿ ತಾಲೂಕು ಎಮ್ಮಿಗನೂರು ಗ್ರಾಮದ ಎಸ್ ಡಬ್ಲ್ಯೂ ಎಸ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಸಮಾಜ ಸುಧಾರಕರ ಉಚಿತ ಭಾವಚಿತ್ರಗಳ ವಿತರಣೆ ಕಾರ್ಯಕ್ರಮ ಜರಗಿತು. ಈ ವೇಳೆ ದಾನಿಗಳಾದ ಎಮ್ಮಿಗನೂರಿನ ಬಡಿಗೇರ್ ವೀರೇಶ ಮಾತನಾಡಿ ಸರ್ಕಾರಿ ಶಾಲೆಗಳು ಬಡವರ ಮಕ್ಕಳಿಗೆ ಸಂಜೀವಿನಿ ಇದ್ದ ಹಾಗೆ ಸಾರ್ವಜನಿಕರು ಜನಪ್ರತಿನಿದಿನಗಳು ಅಧಿಕಾರಿಗಳು ಸರ್ಕಾರಿ ಶಾಲೆಗಳನ್ನು ದತ್ತು ತೆಗೆದುಕೊಂಡು ಬಲವರ್ಧನೆಗೊಳಿಸಬೇಕು ಎಂದರು.ಈ ಸಂದರ್ಭದಲ್ಲಿ ಎಸ್ ಡಿಎಂ ಸಿ ಅಧ್ಯಕ್ಷರಾದ ಚಂದ್ರಶೇಖರ, ಮುಖ್ಯ ಶಿಕ್ಷಕ ಬಸವರಾಜ, ಸಹ ಶಿಕ್ಷಕರಾದ ಮಂಜಪ್ಪ ಹೂಗಾರ,ವೀರೇಶ, ಜ್ಯೋತಿ,ಸಂಗಮ್ಮ, ಲಕ್ಷ್ಮೀ,ಶಂಕ್ರಮ್ಮ, ಶಿವಮ್ಮ,ಹಾಗೂ ಪ್ರಮುಖರಾದ ಮಲ್ಲೇಶ್,ರಾಮಕೃಷ್ಣ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ನೌಕರರ ಬಾಕಿ ವೇತನ ನೀಡುವಂತೆ ಆಗ್ರಹಿಸಿ ದಸಂಸ ಧರಣಿ

**ಶಹಾಬಾದ:** ನಗರಸಭೆಯ ದಿನಗೂಲಿ, ಹೊರಗುತ್ತಿಗೆ ನೌಕರರಿಗೆ ಬಾಕಿ ಇರುವ ವೇತನವನ್ನು ಕೂಡಲೇ ನೀಡಬೇಕೆಂದು ಆಗ್ರಹಿಸಿ ಬುಧವಾರ ದಸಂಸ ವತಿಯಿಂದ ನಗರಸಭೆಯ ಮುಂಭಾಗದಲ್ಲಿ ಧರಣಿ ಸತ್ಯಾಗ್ರಹ ಕೈಗೊಳ್ಳಲಾಯಿತು.

ದಸಂಸ ರಾಜ್ಯ ಸಂಘಟನಾ ಸಂಚಾಲಕ ಮರಿಯಪ್ಪ ಹಳ್ಳಿ ಮಾತನಾಡಿ, ನಗರ ಸಭೆಯಲ್ಲಿ ಹೊರಗುತ್ತಿಗೆಯ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ, ಸರಿ ಸುಮಾರು ದಿನಗೂಲಿ ನೌಕರರಿಗೆ 14 ತಿಂಗಳು, ಹೊರ ಗುತ್ತಿಗೆ ನೌಕರರಿಗೆ 12 ತಿಂಗಳ ಸಂಬಳ ಮಾಡದೇ ಇರುವುದರಿಂದ ಅವರಿಗೆ ಎಲ್ಲಿಲ್ಲ ಸಂಕಟ ಎದುರಾಗಿದೆ. ಪ್ರತಿ ತಿಂಗಳು ಸಂಬಳ ನೀಡಬೇಕಾದ ನಗರಸಭೆ ಸುಮಾರು ಒಂದು ವರ್ಷದಿಂದ ಸಂಬಳ ನೀಡದೇ ದುಡಿಸಿಕೊಂಡಿದೆ. ದುಡಿದ ಜನರಿಗೆ ಸಂಬಳ ನೀಡದೇ ಅನ್ಯಾಯ ಮಾಡುತ್ತಿರುವ ನಗರಸಭೆಯ ಅಧಿಕಾರಿಗಳ ವರ್ತನೆ ಖಂಡನೀಯವಾದುದು. ಸಂಬಳ ಇಂದು ಕೊಡುವರು ಅಥವಾ ಇನ್ನೆರಡು ತಿಂಗಳ ನಂತರ ಕೊಡುವರು ಎಂಬ ಆಶಾಭಾವನೆಯಿಂದ ಹೊರಗಡೆ ಸಾಲ ಮಾಡಿ ಮಕ್ಕಳ ವಿದ್ಯಾಭ್ಯಾಸ ಮಾಡಿಸುತ್ತಿದ್ದಾರೆ.ಆದರೆ ವರ್ಷಗಳೇ ಕಳೆದರೂ ಸಂಬಳವಾಗದೇ ಇರುವುದರಿಂದ ಸಾಲದ ಶೂಲಕ್ಕೆ ಬಿದ್ದಿದ್ದಾರೆ.ಇದರಿಂದ ಅವರ ಸಂಸಾರ ಬೀದಿಪಾಲಾಗುವ ಸಾಧ್ಯತೆಯಿದೆ. ಮಕ್ಕಳ ವಿದ್ಯಾಭ್ಯಾಸ, ಮನೆ ಬಾಡಿಗೆ ಇಲ್ಲದೆ ಅವರ ಜೀವನ ನರಕವಾಗಿದೆ. ಸಂಬಳ ಕೇಳಿದರೆ ಕರ ವಸೂಲಿಯಾಗಿಲ್ಲ ಎಂದು ಕುಂಟು ನೆಪ ಹೇಳುತ್ತಿದ್ದಾರೆ.


ನಗರಸಭೆಯ ಪೌರಾಯುಕ್ತರು ಉದ್ದೇಶ ಪೂರ್ವಕವಾಗಿ ನೌಕರರ ಜೀವನದಲ್ಲಿ ಜತೆ ಚೆಲ್ಲಾಟವಾಡುತ್ತಿದ್ದಾರೆ. ಈಗಾಗಲೆ ಎಲ್ಲಾ ನೌಕರರಿಗೆ ನೇರ ಪಾವತಿಯಲ್ಲಿ ಅರ್ಜಿ ಕರೆದು ನಾಲ್ಕು ತಿಂಗಳು ಗತಿಸಿದರು ಯಾವುದೆ ರೀತಿಯ ಕ್ರಮ ಕೈಗೊಂಡಿರುವುದಿಲ್ಲ. ಇಲ್ಲಿನ ಪೌರಾಯುಕ್ತರಿಗೆ ಸಂಬಳ ಕೇಳಿದರೆ ಕೊಡುತ್ತೇವೆ ಎಂದು ಹೇಳುತ್ತಾರೆ .ಆದರೆ ಸಂಬಳ ನೀಡುವಲ್ಲಿ ಮೀನಾಮೇಷ ಎಣಿಸುತ್ತಿದ್ದಾರೆ.ಇದರಿಂದ ನೌಕರರ ಕುಟುಂಬ ನಿರ್ವಹಣೆ ದೊಡ್ಡ ಸವಾಲಾಗಿದೆ.ಇದರಿಂದ ಏನಾದರೂ ಅನಾಹುತವಾದರೆ ಯಾರು ಹೊಣೆ? ಕೂಡಲೇ ನಗರಸಭೆಯ ಪೌರಾಯುಕ್ತರು ನಗರ ಸಭೆಯಲ್ಲಿ



ಕಾರ್ಯನಿರ್ವಹಿಸುವ ನೌಕರರಿಗೆ ಪ್ರತಿ ತಿಂಗಳು ಸಂಬಳ ಸರಿಯಾಗಿ ಕೊಡಬೇಕು.ಅಲ್ಲದೇ ಬಾಕಿ ಇರುವ ವೇತನವನ್ನು ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.ಅಲ್ಲದೇ ದಿನನಿತ್ಯ ನಿಲ್ಲಿಸಿರುವ ಹಾಜರಿ ಮುಂದುವರೆಸಬೇಕು. ಹೊರಗುತ್ತಿಗೆ ನೌಕರರನ್ನು ಖಾಯಂಗೊಳಿಸಬೇಕೆಂದರು. ನಂತರ ತಹಸೀಲ್ದಾರ ನೀಲಪ್ರಭಾ ಬಬಲಾದ ಹಾಗೂ ನಗರಸಭೆಯ ಪೌರಾಯುಕ್ತರಿಗೆ ಮನವಿ ಪತ್ರ ಸಲ್ಲಿಸಿದರು.

ದಸಂಸ ಜಿಲ್ಲಾ ಸಂಚಾಲಕ ಮರೆಪ್ಪ ಮೇತ್ರೆ ,ದವಿಓ ಸಂಚಾಲ ಪೂಜಪ್ಪ ಮೇತ್ರೆ,ಉದಯಕುಮಾರ ಸಾಗರ,ಮಲ್ಲಣ್ಣ ಮಸ್ಕಿ,ನರಸಿಂಹಲೂ ರಾಯಚೂರಕರ್,ಶರಣಪ್ಪಹಿರೇಮನಿ,ಶಿವಮೂರ್ತಿ ಪಟ್ಟೇದಾರ,ಮಲ್ಲಿಕಾರ್ಜುನ ಪೊಲೀಸ್ ಪಾಟೀಲ,ಮಲ್ಲಣ್ಣ ಮರತೂರ,ಹುನೇಶ ದೊಡ್ಡಮನಿ,ಹಣಮಂತ ಪವಾರ,ಅನೀಲ ಹೊನಗುಂಟಿಕರ್,ಮಲ್ಲಿನಾಥ ಬೈರಾಮಡಗಿ,ಗೌತಮ ನಿಂಬರ್ಗಿ,ಸಚಿನ್ ಗಿರೆನೂರ್,ಮಹೇಬೂಬ ಸೇರಿದಂತೆ ಅನೇಕ ಗುತ್ತಿಗೆ ನೌಕರರು ಇದ್ದರು.

# ಜಲ, ಭಾಷಾ ವಿವಾದಗಳ ನಡುವೆಯೂ ಸಹೋದರ ಭಾವ ಅಬಾಧಿತ ಎಂಎಲ್‌ಸಿ ಬಸವರಾಜ ಪಾಟೀಲ್



**ಆಳಂದ:ಜು.31:** ಮಹಾರಾಷ್ಟ್ರ ರಾಜ್ಯ ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಬಸವರಾಜ ಪಾಟೀಲ ಅವರು ಎಂಎಲ್‌ಸಿಯಾಗಿ ಆಯ್ಕೆಯಾದ ಬಳಿಕ ಪ್ರಥಮ ಬಾರಿಗೆ ಆಳಂದ ಪಟ್ಟಣದ ತಮ್ಮ ಕುಟುಂಬಸ್ಥರ ನಿವಾಸಕ್ಕೆ ಆಗಮಿಸಿದರು. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ–ಮಹಾರಾಷ್ಟ್ರ ನಡುವಿನ ಭಾಷೆ ಮತ್ತು ಜಲ ವಿವಾದಗಳ ಬಗ್ಗೆ ಸ್ಪಷ್ಟ ನಿಲುವು ವ್ಯಕ್ತಪಡಿಸಿದರು.

“ಮೊದಲು ಭಾರತೀಯರು” ಎಂಬ ಸಂದೇಶ:

“ಕರ್ನಾಟಕ–ಮಹಾರಾಷ್ಟ್ರ ಭಾಷೆ ಮತ್ತು ಜಲವಿವಾದ ಯಾವುದೂ ಸಲ್ಲದು. ನಾವು ಮೊದಲು ಭಾರತೀಯರು ಎಂಬ ಭಾವನೆಯೊಂದಿಗೆ ಸಾಗಬೇಕಾಗಿದೆ. ಎರಡೂ ರಾಜ್ಯಗಳ ಬಾಂಧವ್ಯವನ್ನು ಯಾರಿಂದಲೂ ಕಸಿದುಕೊಳ್ಳಲು ಸಾಧ್ಯವಿಲ್ಲ” ಎಂದು ಪಾಟೀಲ ಹೇಳಿದರು.

ತಮ್ಮ ಕುಟುಂಬದ ಬೇರುಗಳು ಆಳಂದದಲ್ಲಿವೆ ಎಂದು ಭಾವುಕರಾದ ಅವರು, “ನಮ್ಮ ಪೂರ್ವಜರು ಇಲ್ಲಿದ್ದರು. ಈಗಲೂ ನಮ್ಮ ಸಂಬಂಧಿಕರು ಇಲ್ಲಿದ್ದಾರೆ. ನಾವು ಬಂದಾಗೊಮ್ಮೆ ಇಲ್ಲಿನ ಜನರು ತೋರುವ ಪ್ರೀತಿ ವಿಶ್ವಾಸವನ್ನು ಎಂದಿಗೂ ಮರೆಯಲಾಗದು” ಎಂದು ನುಡಿದರು.

ಕೇಂದ್ರ, ರಾಜ್ಯ ಸರ್ಕಾರಗಳ ಆಡಳಿತ ಶ್ಲಾಘನೆ:

ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರ ನೇತೃತ್ವದಲ್ಲಿ ಉತ್ತಮ ಆಡಳಿತ ನಡೆಯುತ್ತಿದೆ ಎಂದು ಅಭಿಪ್ರಾಯಪಟ್ಟ ಪಾಟೀಲ, ಮುಂಬರುವ ದಿನಗಳಲ್ಲಿ ಕರ್ನಾಟಕದಲ್ಲೂ ಬಿಜೆಪಿ ಸರ್ಕಾರ ಅಸ್ತಿತ್ವಕ್ಕೆ ಬರುವ ವಿಶ್ವಾಸ ವ್ಯಕ್ತಪಡಿಸಿದರು. “ಬಿಜೆಪಿಯೊಂದಿಗೆ ಇರುವುದೇ ದೇಶದ ಪ್ರಗತಿಗೆ ದಾರಿ ಎಂದು ನಾನೊಬ್ಬ ಶಾಸಕನಾಗಿ ಹೇಳುತ್ತಿದ್ದೇನೆ” ಎಂದರು.

ಮಹಾರಾಷ್ಟ್ರದ ವಾಣಿಜ್ಯೀಕರಣಕ್ಕೆ ಅನ್ಯಾಯವಾಗಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ದೊಡ್ಡ ದೊಡ್ಡ ಕಂಪನಿಗಳು, ಉದ್ಯಮಗಳು ಸ್ಥಾಪನೆಯಾಗುತ್ತಿದ್ದು, ಮಹಾರಾಷ್ಟ್ರ ಕೈಗಾರಿಕಾ ರಂಗದಲ್ಲಿ ಬಲಿಷ್ಠವಾಗಿ ಬೆಳೆಯುತ್ತಿದೆಯೇ ಹೊರತು ಅನ್ಯಾಯವಾಗಿಲ್ಲ ಎಂದು ಸ್ಪಷ್ಟಪಡಿಸಿದರು.

ಯುವ ಸಮುದಾಯಕ್ಕೆ ಆಶ್ವಾಸನೆ, ನೀಟ್ ವಿವಾದದ ಬಗ್ಗೆ ಸಮರ್ಥನೆ

ಪ್ರಧಾನಿ ಮತ್ತು ಮುಖ್ಯಮಂತ್ರಿಗಳ ಸರ್ಕಾರಗಳು ಯುವಕರ ಭವಿಷ್ಯಕ್ಕಾಗಿ ಶ್ರಮಿಸುತ್ತಿವೆ ಎಂದು ಹೇಳಿದ ಪಾಟೀಲ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಿಂದ ಪಕ್ಷಕ್ಕೆ ಹಿನ್ನಡೆಯಾಗಿದೆ ಎಂಬ ಆರೋಪವನ್ನು ತಳ್ಳಿಹಾಕಿದರು. “ಕೇಂದ್ರ ಸರ್ಕಾರ ಉತ್ತಮ ನಿರ್ಣಯ ತೆಗೆದುಕೊಂಡಿದೆ. ಸಂಸತ್ತಿನಲ್ಲಿ ಉತ್ತಮ ಚರ್ಚೆ ನಡೆಯುತ್ತಿದ್ದು, ಸೂಕ್ತ ಕಾಯ್ದೆ ರೂಪಿಸಲಾಗುತ್ತಿದೆ. ಶಿಕ್ಷಣ ಕ್ಷೇತ್ರದ ವಿಷಯದಲ್ಲಿ ಸರ್ಕಾರ ಜಾಗೃತವಾಗಿದ್ದು, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಬಗ್ಗೆ ಗಂಭೀರವಾಗಿದೆ” ಎಂದು ವಿವರಿಸಿದರು.

ರೈತರ ಸಾಲಮನ್ನಾ: ಐತಿಹಾಸಿಕ ನಿರ್ಣಯ: ಮಹಾರಾಷ್ಟ್ರ ಸರ್ಕಾರ ರೈತರ ಪರವಾಗಿ 35 ಸಾವಿರ ಕೋಟಿ ರೂಪಾಯಿ ಸಾಲಮನ್ನಾ ಮಾಡಿರುವುದು ರಾಜ್ಯದ ಇತಿಹಾಸದಲ್ಲೇ ಮೊದಲ ಬಾರಿಗೆ ಆಗಿರುವ ಬೃಹತ್ ನಿರ್ಣಯ ಎಂದು ಪಾಟೀಲ ಬಣ್ಣಿಸಿದರು. ಈ ಕ್ರಮದಿಂದ ಮಹಾರಾಷ್ಟ್ರದ ಸಮಸ್ತ ರೈತರಿಗೂ ಅನುಕೂಲವಾಗಿದೆ ಎಂದು ಅವರು ಹೇಳಿದರು.


ಪಾಟೀಲರ ಸಹೋದರ ಆಗಿರುವ ಪುರಸಭೆ ಮಾಜಿ ಅಧ್ಯಕ್ಷ ವಿಠ್ಠಲರಾವ್ ಪಾಟೀಲ, ಪುತ್ರ ನ್ಯಾಯವಾದಿ ಬಿ.ವಿ.ಪಾಟೀಲ, ಚನ್ನಬಸವ ಪಾಟೀಲ, ಬಿಜೆಪಿ ಜಿಲ್ಲಾ ವಕ್ತಾರ ಸಂಜಯ ಮಿಸ್ಕಿನ್, ಮಹೇಶ ಸೂರೆ, ಶರಣಗೌಡ ಪಾಟೀಲ, ಪಿಎಚ್‌ಡಿ ಮಾಜಿ ಅಧ್ಯಕ್ಷ ಹಣಮಂತ ಕಾಬಡೆ, ನಿಜಲಿಂಗಪ್ಪ ಕೊರಳ್ಳಿ, ಸಂಜಯ ನಾಯಕ, ಡಾ. ಸಾಗರ ಕಟಂಬಲೆ, ಉದ್ಯಮಿ ವಿಶಾಲ ಗಾಂಧಿ, ಡಾ. ಯೋಗೇಶ ಬಂಡಗಾರ, ಮಾಣಿಕ ಜಾಧವ, ಪುರಸಭೆ ಮಾಜಿ ಅಧ್ಯಕ್ಷ ಅಮ್ಜದ್ ಅಲಿ ಖಜರ್ಗಿ, ಮುಸ್ತಾಫ್, ಸೇರಿದಂತೆ ಮುಸ್ಲಿಂ ಮುಖಂಡರು ಒಳಗೊಂಡು ವಿವಿಧ ಸಮುದಾಯದ ನಾಗರಿಕರು ಪಾಟೀಲ ಅವರನ್ನು ಸನ್ಮಾನಿಸಿದರು.

# ಆ.1 ರಿಂದ ಜಲಜಾಕ್ಷಿ ಪಿ. ಕುಲಕರ್ಣಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ

**ಕಲಬುರಗಿ:ಜು.31:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ಕಲಬುರಗಿಯ ಯುವ ಚಿತ್ರಕಲಾವಿದೆ ಜಲಜಾಕ್ಷಿ ಪಿ. ಕುಲಕರ್ಣಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನವನ್ನು ಆ. 1 ರಿಂದ 3, 2026 ರವರೆಗೆ ನಗರದ ದಿ ಆರ್ಟ್ ಇಂಟ್ರಿಗೇಶನ್ ಚಿತ್ರಕಲಾ ಮಹಾವಿದ್ಯಾಲಯದ ಅಂಕುರ್ ಕಲಾ ಗ್ಯಾಲರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಚಿತ್ರಕಲಾ ಪ್ರದರ್ಶನವನ್ನು ಆ. 1 ರಂದು ಬೆಳಿಗ್ಗೆ 11.00 ಗಂಟೆಗೆ ಆಪರ ಆಯುಕ್ತ ಕಛೇರಿಯ ನಿವೃತ್ತ ಚಿತ್ರಕಲಾ ವಿಷಯ ಪರಿವೀಕ್ಷಕ ಶಿವಾನಂದ ಕೊಪ್ಪದ ಉದ್ಘಾಟಿಸುವರು. ಹಿರಿಯ ಚಿತ್ರಕಲಾವಿದರಾದ ಬಾಬುರಾವ್ ಹೆಚ್ ಮತ್ತು ವೀರೇಂದ್ರ ಶಾಹ ಮುಖ್ಯ ಅತಿಥಿಯಾಗಿ ಭಾಗವಹಿಸುವರು. ದಿ ಆರ್ಟ್ ಇಂಟಿಗ್ರೇಶನ್ ಚಿತ್ರಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಎಂ.ಎಚ್. ಬೆಳಮಗಿ ಅಧ್ಯಕ್ಷತೆ ವಹಿಸುವರು.

ಜಲಜಾಕ್ಷಿ ಪಿ. ಕುಲಕರ್ಣಿ ಅವರು ಚಿತ್ರಕಲೆಯಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದು, ಕರ್ನಾಟಕ ಲಲಿತಕಲಾ ಅಕಾಡೆಮಿಯ 53ನೇ ವಾರ್ಷಿಕ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳನ್ನು ಪಡೆದಿದ್ದಾರೆ. ಸುಮಾರು 15ಕ್ಕೂ ಹೆಚ್ಚು ಏಕವ್ಯಕ್ತಿ ಮತ್ತು ಸಮೂಹ ಚಿತ್ರಕಲಾ ಪ್ರದರ್ಶನಗಳಲ್ಲಿ ಭಾಗವಹಿಸಿದ್ದಾರೆ. ಜಲಜಾಕ್ಷಿ ಅವರು ವಿವಿಧ ಮಾಧ್ಯಮದಲ್ಲಿ ರಚಿಸಿದ ಸುಮಾರು 15ಕ್ಕೂ ಹೆಚ್ಚು ಚಿತ್ರ ಕಲಾಕೃತಿಗಳು ಪ್ರದರ್ಶನಗೊಳ್ಳಲಿವೆ. ಇವರ ಚಿತ್ರಕಲಾಕೃತಿಗಳಲ್ಲಿ ಪರಿಸರ ಕೇಂದ್ರಿತ ಮತ್ತು ಸ್ತ್ರೀ ಸಂವೇದನೆಯ ವಸ್ತು–ವಿಷಯಗಳನ್ನು ಒಳಗೊಂಡಿವೆ.



**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**